# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 249 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–04–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 01 | Issue - 249 | Title- Code: KARKAN 28269 | Chitradurga | Date: 23-04-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮತದಾನಕ್ಕೆ ಕಾರ್ಯಕ್ಕೆ 9904 ಅಧಿಕಾರಿ ಹಾಗೂ ಸಿಬ್ಬಂದಿಗಳ ನೇಮಕ 2

ಚಂದ್ರಪ್ಪ ಆಯ್ಕೆಗೆ ಕಾರ್ಯಕರ್ತರ ಸಂಕಲ್ಪ: ಶಾಸಕ ರಘುಮೂರ್ತಿ 3

ಕಂಠಾಪುರದಲ್ಲಿ ಕಲುಷಿತ ನೀರು ಕುಡಿದು 100 ಕ್ಕೂ ಹೆಚ್ಚು ಜನಕ್ಕೆ ಜ್ವರ, ತಲೆನೋವು 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಚಿತ್ರದುರ್ಗ ಕ್ಷೇತ್ರದಿಂದ ಗೋವಿಂದ ಕಾರಜೋಳ ಗೆಲುವಿಗೆ ಅತಿ ಹೆಚ್ಚು ಲೀಡ್: ಬಿ.ಕಾಂತರಾಜ್

» ನಮ್ಮಜನ ಸಮಾಚಾರ

ಚಿತ್ರದುರ್ಗ : ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಿಂದ ಮೈತ್ರಿ ಅಭ್ಯರ್ಥಿ ಗೋವಿಂದ ಕಾರಜೋಳ ಅವರಿಗೆ ತಮ್ಮ ಬೂತ್ ನಲ್ಲಿ ಅತಿ ಹೆಚ್ಚು ಲೀಡ್ ಕೊಡಿಸಿ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿ ಎಂದು ಜೆಡಿಎಸ್. ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ಕರೆ ನೀಡಿದರು.

ನಗರದ ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ( ಎನ್ ಡಿಎ) ಅಭ್ಯರ್ಥಿ ಗೋವಿಂದ ಕಾರಜೋಳ ಅವರ ಗೆಲುವಿಗೆ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ನಮ್ಮ ಕಾರ್ಯಕರ್ತರು ಪ್ರಾಮಾಣಿಕವಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಸತ್ಯವನ್ನು ಮರೆಮಾಚಿ ಸುಳ್ಳಿನ ಮೇಲೆ ಆಡಳಿತ ನಡೆಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದರು. ಮಧ್ಯಕರ್ನಾಟಕದ ಬಯಲುಸೀಮೆ



### ಈ ಬಾರಿ ಮದಕರಿ ಥೀಮ್ ಪಾರ್ಕ್ ಅಭಯ

> ಕಳೆದ ಬಾರಿ ಚುನಾವಣೆ ಸಂದರ್ಭದಲ್ಲಿ ಕೊಟ್ಟ ಮಾತಿನಂತೆ ನಮ್ಮಕನಸಾಗಿರುವ ಮದಕರಿ ಥೀಮ್ ಪಾರ್ಕ ಮಾಡುತ್ತಾರೆ ಎಂಬ ವಿಶ್ವಾಸವಿದ್ದು ಕೇಂದ್ರ ಸರ್ಕಾರ ಒತ್ತಡ ಹಾಕುವ ಮೂಲಕ ಗೋವಿಂದ ಕಾರಜೋಳ ನಮ್ಮಕನಸು ನನಸು ಮಾಡುತ್ತಾರೆ.
>
> » ಬಿ.ಕಾಂತರಾಜ್ ರಾಜ್ಯ ಪ್ರಧಾನ ಕಾರ್ಯದರ್ಶಿ ಚಿತ್ರದುರ್ಗ ಜಿಲ್ಲೆ

ಚಿತ್ರದುರ್ಗ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದೆ. ಮದಕರಿನಾಯಕ ಥೀಂ ಪಾರ್ಕ್ ಆಗಬೇಕು ಎಂಬುದು ಜನರ ದೊಡ್ಡ ಆಸೆಯಾಗಿದೆ ಮತ್ತು ನಮ್ಮ ಪ್ರಮುಖ ಬೇಡಿಕೆ ಆಗಿದೆ.ಇದರ ಜೊತೆಗೆ ಕೋಟೆ ಅಭಿವೃದ್ಧಿಗೆ ಒತ್ತು ನೀಡುವ ಮೂಲಕ ಪ್ರವಾಸಿ ತಾಣ ಅಭಿವೃದ್ಧಿಗೆ ಬಿಜೆಪಿ ಗೆಲುವು ಸಹಕಾರಿಯಾಗಲಿದ್ದು ಕೇಂದ್ರ ಸರ್ಕಾರದಲ್ಲಿ ನೂರಕ್ಕೆ ನೂರು ಮೋದಿ ಪ್ರಧಾನಿಯಾಗಲಿದ್ದಾರೆ ಎಂದರು.

ಅಪ್ಪರ್ ಭದ್ರಾ ಯೋಜನೆಗೆ ಕೇಂದ್ರ ಸರ್ಕಾರ 5300 ಕೋಟಿ ರೂ.ಗಳನ್ನು ಘೋಷಿಸಿದೆ. ಗೋವಿಂದ ಕಾರಜೋಳ ಅವರನ್ನು ಗೆಲ್ಲಿಸಿದರೇ ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗುವುದು ಖಚಿತವಾಗಿದ್ದು ದುರ್ಗದ ಅಭಿವೃದ್ಧಿಗೆ ವೇಗ ದೊರೆಯಲಿದೆ. ಕ್ಷೇತ್ರಾದ್ಯಂತ ಸಂಚರಿಸಿ ಕಾರ್ಯಕರ್ತರ ಜೊತೆ ಮಾತುಕತೆ ನಡೆಸಿದ್ದು ಎರಡು ಸುತ್ತಿನ ಪ್ರಚಾರ ನಡೆಸಿದ್ದು ನಮ್ಮ ಕಾರ್ಯಕರ್ತರು ಬಿಜೆಪಿಗೆ ಶಕ್ತಿಯಾಗಿ ನಿಂತು ಪ್ರತಿ ಬೂತ್ ನಲ್ಲಿ ಹೆಚ್ಚಿನ ಲೀಡ್ ಕೊಡಿಸುವುದರಲ್ಲಿ ಅನುಮಾನವಿಲ್ಲ. ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಿಂದ ಹೆಚ್ಚಿನ ಲೀಡ್ ಕೊಡಿಸುವ ಮೂಲಕ ಬಿಜೆಪಿ ಗೆಲ್ಲಿಸುತ್ತೇವೆ ಎಂದು ಹೇಳಿದರು.

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ತಿಮ್ಮಣ್ಣ, ಜಿಲ್ಲಾ ಉಪಾಧ್ಯಕ್ಷ ಜೆ.ಎನ್.ಕೋಟೆ ಗುರುಸಿದ್ದಪ್ಪ, ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ಮಠದಹಟ್ಟಿ ವೀರಣ್ಣ, ಯುವ ಘಟಕದ ಜಿಲ್ಲಾಧ್ಯಕ್ಷ ಪ್ರತಾ[illegible]ಜೋಗಿ ಇದ್ದರು.

## ಫಾಸ್ಟ್ ನ್ಯೂಸ್

### ಮತ ಚಲಾಯಿಸಲು ಏ.23 ಕಡೆಯ ದಿನ

» ಚಿತ್ರದುರ್ಗ

ಬೇರೆ ಲೋಕಸಭಾ ಕ್ಷೇತ್ರದ ಮತದಾರರಾಗಿದ್ದು, ಚಿತ್ರದುರ್ಗ ಲೋಕಸಭಾ ಕ್ಷೇತ್ರ ಚುನಾವಣೆ ಕಾರ್ಯದಲ್ಲಿ ನಿರತವಾಗಿರುವ ನೌಕರರಿಗೆ, ಮತಚಲಾಯಿಸಲು ಅನುಕೂಲವಾಗುವಂತೆ ವಿಧಾನಸಭಾ ಕ್ಷೇತ್ರವಾರು ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಅಂಚೆ ಮತದಾನ ಸೇವಾಕೇಂದ್ರ ತರೆದು ಏಪ್ರಿಲ್ 22 ರವರೆಗೆ ಮತಚಲಾಯಿಸಲು ಅವಕಾಶ ಕಲ್ಪಿಸಲಾಗಿತ್ತು. ಇದುವರೆಗೂ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಮತ ಚಲಾಯಿಸಲು ಸಾಧ್ಯವಾಗದಿರುವ ನೌಕರರು ಚಿತ್ರದುರ್ಗ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ಮತದಾನ ಸೇವಾ ಕೇಂದ್ರದಲ್ಲಿ ಏಪ್ರಿಲ್ 23 ರಂದು ಮತ ಚಲಾಯಿಸಲು ಕಡೆಯ ಅವಕಾಶ ನೀಡಲಾಗಿದೆ. ನೌಕರರು ಇದರ ಸದುಪಯೋಗ ಪಡೆದುಕೊಂಡು ್ತಚಲಾಯಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

### ನಾಯಕನಹಟ್ಟಿ: ರಾಮದುರ್ಗದ ಬಳಿ ಸಿಡಿಲು ಇಬ್ಬರಿಗೆ ಗಾಯ



» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ರಾಮದುರ್ಗದಲ್ಲಿ ಸೋಮವಾರ ಸಂಜೆ ಸಿಡಿಲು ಸೋಂಕಿ ಗಾಯಗೊಂಡ ಕುರಿಗಾಯಿಗಳು ಇಬ್ಬರನ್ನು ನಾಯಕನಹಟ್ಟಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಯಿತು.

ಸೋಮವಾರ ಸಂಜೆ ಕುರಿ ಮೇಯಿಸುವ ಸಂದರ್ಭದಲ್ಲಿ ಸಿಡಿಲು ಒಡೆದಿದೆ. ಗ್ರಾಮದ ಮಂಜುನಾಥ(30), ರಾಮ(20) ಇವರಿಗೆ ಸಿಡಿಲಿನ ಸೋಂಕು ತಗುಲಿ ಗಾಯಗಳಾಗಿ ಕೂಡಲೇ ಅವರನ್ನು ನಾಯಕನಹಟ್ಟಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

### ಏಪ್ರಿಲ್ 29ರಿಂದ ದ್ವಿತೀಯ ಪಿ.ಯು.ಸಿ. ಪೂರಕ ಪರೀಕ್ಷೆಗೆ ಜಿಲ್ಲಾಡಳಿತ ಸಜ್ಜು

» ಚಿತ್ರದುರ್ಗ

ಏಪ್ರಿಲ್ 29ರಿಂದ ಮೇ 16ರವರೆಗೆ ಜಿಲ್ಲೆಯ 09ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳು ಸುಗಮವಾಗಿ ನಡೆಯಲು ಜಿಲ್ಲಾಡಳಿತ ಅಗತ್ಯ ಪೂರ್ವಸಿದ್ಧತಾ ಕ್ರಮಗಳನ್ನು ಕೈಗೊಂಡಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಹೇಳಿದರು.ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ದ್ವಿತೀಯ ಪಿ.ಯು.ಸಿ. ಪೂರಕ ಪರೀಕ್ಷಾ ಪೂರ್ವಸಿದ್ಧತೆಗಳ ಕುರಿತು ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಚಿತ್ರದುರ್ಗ ಜಿಲ್ಲಾ ಕೇಂದ್ರದ 03 ಪರೀಕ್ಷಾ ಕೇಂದ್ರಗಳಲ್ಲಿ, ಚಳ್ಳಕೆರೆಯ ತಾಲೂಕು ಕೇಂದ್ರದ 02 ಸ್ಥಳಗಳಲ್ಲಿ ಹಾಗೂ ಹಿರಿಯೂರು, ಹೊಸದುರ್ಗ, ಮೊಳಕಾಲ್ಮೂರು ಮತ್ತು ಹೊಳಲ್ಕೆರೆ ತಾಲೂಕುಗಳ ತಲಾ ಒಂದೊಂದು ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ನಡೆಸಲು ಕ್ರಮ ವಹಿಸಲಾಗಿದೆ ಎಂದವರು ನುಡಿದರು.ಈ ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ, ಪಾರದರ್ಶಕ ಹಾಗೂ ಮುಕ್ತವಾಗಿ ನಡೆಸಲು ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಈಗಾಗಲೇ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.

ಪುಟ ↘ 2

# 10 ವರ್ಷ ಯಾವುದೇ ವಿವಾದವಿಲ್ಲದೆ ದಕ್ಷ ಆಡಳಿತ ನೀಡಿದ ಕೀರ್ತಿ ಮೋದಿಯದ್ದು: ನಟಿ ರಾಗಿಣಿ ದ್ವಿವೇದಿ

» ಚಳ್ಳಕೆರೆ

ಯಾವುದೇ ವಿವಾದಗಳನ್ನು ಮೈಮೇಲೆ ಎಳೆದುಕೊಳ್ಳದೆ ಸರಳ, ಸದೃಢವಾಗಿ ದೇಶವನ್ನು ಅಭಿವೃದ್ಧಿ ಪಥದತ್ತ ಮುನ್ನಡೆಸಿದ ಖ್ಯಾತಿ ಪ್ರಧಾನಮಂತ್ರಿ ನರೇಂದ್ರಮೋದಿಯವರದ್ದು ಎಂದು ದಕ್ಷಿಣಭಾರತ ಬಹುಬಾಷ ಚಲನಚಿತ್ರನಟಿ ರಾಗಿಣಿ ದ್ವಿವೇದಿ ತಿಳಿಸಿದರು.

ಅವರು, ಸೋಮವಾರ ರಾತ್ರಿ ಸುಮಾರು 8.30ರ ಸಮಯದಲ್ಲಿ ಬಿಜೆಪಿ ಹಮ್ಮಿಕೊಂಡಿದ್ದ ರೋಡ್ ಶೋ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಅಭ್ಯರ್ಥಿ ಗೋವಿಂದಕಾರಜೋಳ ಮಾತನಾಡಿ, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷದ ನಿರ್ದೇಶನದಂತೆ ಕನ್ನಡ ಚಿತ್ರರಂಗದ ಹೆಸರಾಂತ ನಟಿ ರಾಗಿಣಿ ದ್ವಿವೇದಿ ಚಳ್ಳಕೆರೆಗೆ ಆಗಮಿಸಿ ನಮ್ಮೊಂದಿಗೆ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದಾರೆ. ಪಕ್ಷ ಹಾಗೂ ನನ್ನನ್ನು ಈ ಕ್ಷೇತ್ರದಿಂದ ಗೆಲ್ಲಿಸುವಂತೆ ಮತದಾರರಲ್ಲಿ ಮನವಿ ಮಾಡಿದ್ದಾರೆ. ಈ ಕ್ಷೇತ್ರದಲ್ಲಿ ಬಿಜೆಪಿ ಮತ್ತೊಮ್ಮೆ ತನ್ನ ಗೆಲುವನ್ನು ಸಾಧಿಸಲು ಇಂದಿನ ಈ ಕಾರ್ಯಕ್ರಮ ಹೆಚ್ಚು ಸಹಕಾರಿಯಾಗಿದೆ



ಎಂದರು. ಪ್ರಾರಂಭದಲ್ಲಿ ವಾಲ್ಮೀಕಿ ವೃತ್ತದ ಮೂಲಕ ಮೆರವಣಿಗೆ ಚಾಲನೆ ನೀಡಲಾಯಿತು. ನಂತರ ಅಂಬೇಡ್ಕರ್ ಮತ್ತು ನೆಹರೂ ವೃತ್ತದ ಮೂಲಕ ಮೆರವಣಿಗೆ ಸಾಗಿತು. ದಾರಿಯುದ್ದಕ್ಕೂ ಪಟಾಕಿಸಿ ಸಿಡಿಸಿ ಸಂತಸ ವ್ಯಕ್ತಪಡಿಸಿದರು. ಮೆರವಣಿಗೆಯಲ್ಲಿ ಜೆಡಿಎಸ್ ಮುಖಂಡ ಎಂ.ರವೀಶ್‌ಕುಮಾರ್, ಪಿ.ತಿಪ್ಪೇಸ್ವಾಮಿ, ಬಿಜೆಪಿ ಮುಖಂಡ ಡಿ.ಸೋಮಶೇಖರಮಂಡಿಮಠ, ಸೂರನಹಳ್ಳಿಶ್ರೀನಿವಾಸ್, ನಗರಸಭಾ ಸದಸ್ಯ ಎಚ್.ಜಯಣ್ಣ, ವೆಂಕಟೇಶ್‌ಯಾದವ್, ಕೆ.ಟಿ.ಕುಮಾರಸ್ವಾಮಿ, ಸಿ.ಎಸ್.ಪ್ರಸಾದ್, ಬಾಳೆಮಂಡಿರಾಮದಾಸ್, ಬಿ.ಎಸ್.ಶಿವಪುತ್ರಪ್ಪ, ಎಂ.ಎಸ್.ಜಯರಾಮ್, ವೈ.ಕಾಂತರಾಜ್ ಮುಂತಾದವರು ಇದ್ದರು.

## ಕಾಂಗ್ರೆಸ್ ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಚೊಂಬು ಜಾಹೀರಾತು




» ಚಿತ್ರದುರ್ಗ

ಸಿಎಂ ಸಿದ್ದರಾಮಯ್ಯ ಹಾಗು ಕಾಂಗ್ರೆಸ್ ಸರ್ಕಾರ ಒಂದು ಸಮಾಜದ ಒಲೈಕೆಗಾಗಿ ಹಿಂದೂ ವಿರೋಧಿಗಳ ರಕ್ಷಣೆಗೆ ನಿಂತಿದ್ದಾರೆ ಎಂದು ಕುಡುಚಿ ಮಾಜಿ ಶಾಸಕ ಪಿ.ರಾಜೀವ್ ಆರೋಪಿಸಿದರು.

ನಗರದ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾಡಿದ ಅವರು, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಸಿಎಂ ಹಾಗೂ ಗೃಹ ಸಚಿವರು ನಿಕೃಷ್ಟವಾದ ಹೇಳಿಕೆ ನೀಡುತ್ತಿದ್ದಾರೆ ಇದು ರಾಜ್ಯದ ದೌರ್ಭಾಗ್ಯ. ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಚೊಂಬು ಜಾಹೀರಾತು ನೀಡುತ್ತಿದ್ದಾರೆ ಎಂದರು.

ರೈತರ ,ದಲಿತರ ಹಾಲು ಉತ್ಪಾದಕರ ಪ್ರೋತ್ಸಾಹ ಸೇರಿದಂತೆ ಅನೇಕ ಯೋಜನೆಗಳನ್ನು ಕತ್ತರಿಸಿ ಜಬರ ಕೈಗೆ ಚೊಂಬು ಕೊಟ್ಟಿದ್ದು, ಕಾಂಗ್ರೆಸ್ ಎಂದರು. ಬಂಜಾರ ಸಮಾಜವು ಈ ಚುನಾವಣೆಯಲ್ಲಿ ಬಿಜೆಪಿ ಪರವಾಗಿ ನಿಲ್ಲುತ್ತದೆ.

ಪುಟ ↘ 2

## ಪ್ರಮುಖ ಸುದ್ದಿ

# 24ರ ಸಂಜೆ 6ಕ್ಕೆ ಬಹಿರಂಗ ಪ್ರಚಾರಕ್ಕೆ ತೆರೆ: ಡಿಸಿ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಇದೇ ಏಪ್ರಿಲ್ 26ರಂದು ಬೆಳಿಗ್ಗೆ 7 ರಿಂದ ಸಂಜೆ 6 ರವರೆಗೆ ಮತದಾನ ನಡೆಯಲಿದೆ. ಮತದಾನ ಮುಕ್ತಾಯಗೊಳ್ಳುವ 48 ಗಂಟೆಗಳ ಮುಂಚೆ ಬಹಿರಂಗ ಪ್ರಚಾರ ಅಂತ್ಯಗೊಳಿಸಬೇಕು ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಚುನಾವಣಾ ವಿಷಯಗಳ ಕುರಿತು ಅಭ್ಯರ್ಥಿ ಹಾಗೂ ಏಜೆಂಟರೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾನ ಮುಕ್ತಾಯಗೊಳ್ಳುವ 48 ಗಂಟೆಗಳ ಮುಂಚೆ ಬಹಿರಂಗ ಪ್ರಚಾರ ಮುಕ್ತಾಯಗೊಳಿಸಬೇಕು. ಅಂದರೆ ಇದೇ ಏಪ್ರಿಲ್ 24ರ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರ ಮುಕ್ತಾಯಗೊಳಿಸಬೇಕು. ಆದರೆ ಅಭ್ಯರ್ಥಿಗಳು ಮಾತ್ರ ಮನೆ ಮನೆ ಪ್ರಚಾರ ಮಾಡಬಹುದಾಗಿದೆ. ಮನೆ ಮನೆ ಮತಯಾಚನೆ ವೇಳೆ 10 ಜನಕ್ಕಿಂತ ಹೆಚ್ಚಿನ ಜನರು ಇರುವಂತಿಲ್ಲ ಎಂದು



ಹೇಳಿದರು. ಮತದಾರರ ಒಲೈಕೆಗಾಗಿ ಮತದಾನದ ಹಿಂದಿನ ದಿನ ಉಚಿತ ಉಡುಗೊರೆ, ಹಣ ಹಂಚಿಕೆ, ಆಮಿಷ ಒಡ್ಡುವುದು ಸೇರಿದಂತೆ ಮತದಾರರಿಗೆ ಮತಗಟ್ಟೆಗಳಿಗೆ ಕರೆದುಕೊಂಡು ಬರಲು ಮತ್ತು ಹೋಗಲು ವಾಹನ ವ್ಯವಸ್ಥೆ, ತಿಂಡಿ, ಊಟದ ವ್ಯವಸ್ಥೆ ಮಾಡತಕ್ಕದ್ದಲ್ಲ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮತದಾನ ಕೇಂದ್ರದ 200 ಮೀಟರ್ ವ್ಯಾಪ್ತಿಯ ನಂತರ ಚಿಕ್ಕದಾಗಿ ಹೆಲ್ಪ್ ಡೆಸ್ಕ್ ತೆರೆಯಲು ಅವಕಾಶವಿದೆ. ಇದಕ್ಕೆ ಸಂಬಂಧಪಟ್ಟ ಎಆರ್‌ಒ ಅನುಮತಿ ನೀಡಲಿದ್ದು, ಅನುಮತಿ ಪಡೆದು ಹೆಲ್ಪ್ ಡೆಸ್ಕ್ ತೆರೆಯಬೇಕು. ಒಬ್ಬ ಅಭ್ಯರ್ಥಿ ಅಥವಾ ಅಭ್ಯರ್ಥಿ ಪರವಾಗಿರುವ ಏಜೆಂಟ್ ಅವರು ಮೂರು ವಾಹನಗಳ ಬಳಸುವುದಕ್ಕೆ ಮಾತ್ರ ಅವಕಾಶವಿದೆ. ಈ ಮೂರು ವಾಹನಗಳಿಗೆ ಕಡ್ಡಾಯವಾಗಿ ಅನುಮತಿಯನ್ನು ಮೊದಲೇ ಪಡೆದಿರಬೇಕು. ಒಂದು ವಾಹನದಲ್ಲಿ ವಾಹನ ಚಾಲಕರು ಸೇರಿದಂತೆ 4 ಜನರಿಗಿಂತ ಹೆಚ್ಚು ಜನರು ಇರುವಂತಿಲ್ಲ ಎಂದು ಹೇಳಿದರು.ಆಯಾ ಕ್ಷೇತ್ರದ ಮತದಾರರನ್ನು ಹೊರತುಪಡಿಸಿ, ಉಳಿದವರು ಕ್ಷೇತ್ರ ತೊರೆಯಬೇಕು: ಆಯಾ ಕ್ಷೇತ್ರದ ಮತದಾರರನ್ನು ಹೊರತುಪಡಿಸಿ, ಉಳಿದವರು ಕಡ್ಡಾಯವಾಗಿ ಕ್ಷೇತ್ರವನ್ನು ಹೊಟ್ಟುಹೋಗಬೇಕು ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಆಯಾ ಕ್ಷೇತ್ರದ ಮತದಾರರನ್ನು ಹೊರತುಪಡಿಸಿ, ಉಳಿದವರು ಕಡ್ಡಾಯವಾಗಿ ಕ್ಷೇತ್ರ ಬಿಟ್ಟುಹೋಗಬೇಕು. ಕ್ಷೇತ್ರದ ಮತದಾರರಲ್ಲದವರು ಯಾವುದೇ ಲಾಡ್ಜ್, ಹೋಟೆಲ್, ಕಲ್ಯಾಣ ಮಂಟಪ, ಮನೆ ಸೇರಿದಂತೆ ಇತರೆ ಕಡೆ ವಾಸ್ತವ್ಯ ಮಾಡಿದಲ್ಲಿ ಅಂತಹವರ ಮೇಲೆ ಪ್ರಕರಣ ದಾಖಲು ಮಾಡಲಾಗುತ್ತದೆ ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ ಶಾಂತಿಯುತವಾಗಿ ಚುನಾವಣೆ ನಡೆಯಲು ಸಹಕರಿಸಬೇಕು ಎಂದು ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಅಭ್ಯರ್ಥಿ ಹಾಗೂ ಏಜೆಂಟರಿಗೆ ಮನವಿ ಮಾಡಿದರು.

ಮತದಾನದ ದಿನದಂದು ಮತದಾನಕ್ಕಿಂತ ಮುಂಚಿತವಾಗಿ (90 ನಿಮಿಷ ಮುಂಚೆ) ಅಣಕು ಮತದಾನ ಪ್ರಕ್ರಿಯೆಯನಡೆಯಲಿದೆ.ಈಸಂದರ್ಭದಲ್ಲಿ ಅಭ್ಯರ್ಥಿಗಳ ಪರವಾಗಿರುವ ಏಜೆಂಟರು ಹಾಜರಿರಬೇಕು. ಒಂದು ವೇಳೆ ಏಜೆಂಟರು ಹಾಜರಿರದಿದ್ದರೆ 10 ನಿಮಿಷ ಕಾದು ನೋಡಿ, ಅಣಕು ಮತದಾನ ಪ್ರಕ್ರಿಯೆ ಪ್ರಾರಂಭ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೇರಿದಂತೆ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿ ಹಾಗೂ ಏಜೆಂಟರು ಇದ್ದರು.

## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಚೊಂಬು ಜಾಹೀರಾತು

» ಮೊದಲ ಪುಟದಿಂದ

ಸಚಿವ ಸಂಪುಟದಲ್ಲಿ ಬಂಜಾರ ಸಮುದಾಯಕ್ಕೆ ಅನ್ಯಾಯ ಮಾಡಿದೆ. ಎಂದ ಅವರು ಲೋಕಸಭೆ ಚುನಾವಣೆಯಲ್ಲಿ ಒಂದು ಟಿಕೆಟ್ ನೀಡಿಲ್ಲ. ಬಂಜಾರ ಭೋವಿ, ಕೊರಚ ಕೊರಮ ಸಮುದಾಯಗಳಿಗೆ ಅನ್ಯಾಯವಾಗುತ್ತಿದೆ. ಇದು ಜನರಿಗೆ ಅರ್ಥವಾಗಿದೆ. ಇದೆಲ್ಲ ಬೆಳವಣಿಗೆ ಗಮನಿಸಿದ್ದು, ಕರ್ನಾಟಕದಿಂದ ಕಾಂಗ್ರೆಸ್ ಪಕ್ಷವನ್ನು ಕಿತ್ತೊಗೆಬೇಕು ಎಂದು ತೀರ್ಮಾನಿಸಿದೆ. 28 ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲುತ್ತದೆ. ರಾಜ್ಯವನ್ನು ಶಾಂತಿ ತೋಟವನ್ನಾಗಿ ಮಾಡಲು ಬಿಜೆಪಿ ಸಿದ್ಧವಿದ್ದು, ಅದಕ್ಕೆ ಜನರು ಬೆಂಬಲಿ ಗೆಲ್ಲಿಸುತ್ತಾರೆ ಎಂದರು. ಶಾಸಕ ನೇಮಿರಾಜ ನಾಯ್ಕ್, ಮಾಜಿ ಶಾಸಕ ಬಸವರಾಜ ನಾಯ್ಕ್, ಹೂವಿನಹಡಗಲಿ ಶಿರಹಟ್ಟಿ ಶಾಸಕ ಕೃಷ್ಣನಾಯ್ಕ, ಡಾ.ಚಿತ್ರಲಮಾಣಿ, ಶಂಕರ್ ನಾಯ್ಕ್, ಮೃತುಂಜಯ ಬಾದಾಮಿ, ಎಸ್.ಕೆ.ಬೊಳ್ಳುಳ್ಳಿ ಮಾಧ್ಯಮ ವಕ್ತಾರ ನಾಗರಾಜ್ ಬೇದ್ರೇ ಸೇರಿದಂತೆ ಇತರರು ಭಾಗವಹಿಸಿದ್ದರು.

### ಏಪ್ರಿಲ್ 29ರಿಂದ ದ್ವಿತೀಯ ಪಿ.ಯು.ಸಿ. ಪೂರಕ ಪರೀಕ್ಷೆಗೆ ಜಿಲ್ಲಾಡಳಿತ ಸಜ್ಜು

» ಮೊದಲ ಪುಟದಿಂದ

ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ನೆರಳು, ಶೌಚಾಲಯ ಮುಂತಾದ ಸೌಲಭ್ಯಗಳಿರುವಂತೆ ನೋಡಿಕೊಳ್ಳಲು ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಸೂಚಿಸಲಾಗಿದೆ ಎಂದರು.

ಪರೀಕ್ಷೆಯಲ್ಲಿ ಭಾಗವಹಿಸಲಿರುವ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಮೊಬೈಲ್ ಸೇರಿದಂತೆ ಯಾವುದೇ ರೀತಿಯ ವಿದ್ಯುನ್ಮಾನ ಪರಿಕರ ತೆಗೆದುಕೊಂಡು ಹೋಗುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಪರೀಕ್ಷಾರ್ಥಿಗಳು ಪರೀಕ್ಷೆ ಆರಂಭಗೊಳ್ಳುವ ಅರ್ಧ ಗಂಟೆಗೂ ಮುನ್ನ ಕೇಂದ್ರದಲ್ಲಿ ಹಾಜರಿರಬೇಕು. ಸುರಕ್ಷತಾ ಕ್ರಮವಾಗಿ ಪೊಲೀಸ್ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂಧಿಗಳನ್ನು ನಿಯೋಜಿಸಲು ಸೂಚಿಸಲಾಗಿದೆ ಎಂದರು.ಪರೀಕ್ಷೆಗಳ ಮೇಲ್ವಿಚಾರಣೆಗಾಗಿ ತ್ರಿಸದಸ್ಯ ಅಧಿಕಾರಿಗಳ ತಂಡವನ್ನು ರಚಿಸಲಾಗಿದೆ. ಅಲ್ಲದೆ ಮಾರ್ಗಾಧಿಕಾರಿಗಳನ್ನುನೇಮಿಸಲಾಗಿದೆ.ಅಲ್ಲದೇ ವಿಚಕ್ಷಣಾ ದಳವನ್ನು ರಚಿಸಿ, ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಈ ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ ಫಾಸಲೆಯೊಳಗೆ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಲಾಗಿದೆ. ಅಲ್ಲದೇ ಪರೀಕ್ಷಾ ದಿನದಂದು ಕೇಂದ್ರದ ಸುತ್ತಮುತ್ತಲ ಪ್ರದೇಶದೊಳಗೆ ಸಾರ್ವಜನಿಕರು ಗುಂಪುಗೂಡುವುದನ್ನು ನಿಷೇಧಿಸಿ, ಜಿಲ್ಲಾಧಿಕಾರಿಗಳು ತಮ್ಮ ಪ್ರದತ್ತವಾದ ಅಧಿಕಾರವನ್ನು ಬಳಸಿ, ಭಾ.ದಂ.ಸಂ.144ನ್ನು ಜಾರಿಗೊಳಿಸಿ ಆದೇಶ ಹೊರಡಿಸಿದ್ದಾರೆ. ಈ ಅವಧಿಯಲ್ಲಿ ಸುತ್ತಮುತ್ತಲ ಪ್ರದೇಶದಲ್ಲಿರುವ ಝೆರಾಕ್ಸ್ ಮತ್ತಿತರ ಅಂಗಡಿಗಳು ತೆರೆಯದಿರುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

ಸಭೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಟ್ಟಸ್ವಾಮಿ ಸೇರಿದಂತೆ ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿ-ಸಿಬ್ಬಂಧಿಗಳು, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.

### ಮಡಿವಾಳ ಸಮುದಾಯವನ್ನು ಎಸ್ಸಿಗೆ ಸೇರಿಸಲು ಆಗ್ರಹ



» ದಾವಣಗೆರೆ

ರಾಜ್ಯದಲ್ಲಿನ ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸುವುದು, ರಾಜ್ಯದ ಎಲ್ಲಾ ತಾಲೂಕಿನಲ್ಲಿ ಮಡಿಕಟ್ಟೆಗಳನ್ನು ನಿರ್ಮಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರದಲ್ಲಿ ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದ ನೇತೃತ್ವದಲ್ಲಿ ಮಡಿವಾಳ ಸಮುದಾಯದವರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ, ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ ಅವರಿಗೆ ಮನವಿ ಸಲ್ಲಿಸಿದರು. ನಂತರ ಸಮುದಾಯವು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಸೂಚಿಸುವುದಾಗಿ ಘೋಷಣೆ ಮಾಡಿತು.ಮನವಿ ಸ್ವೀಕರಿಸಿ ಮಾತನಾಡಿದ ಡಾ.ಪ್ರಭಾ ಮಲ್ಲಿಕಾರ್ಜುನ, ನಿಮ್ಮ ಬೇಡಿಕೆಗಳನ್ನು ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೆ ತಂದು ಸಾಧ್ಯವಾದ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನ ಮಾಡಲಾಗುವುದು. ಉಳಿದಂತೆ ಸ್ವಸಹಾಯ ಗುಂಪುಗಳಿಗೆ ಸಹಾಯಧನ, ಎಲ್ಲಾ ತಾಲೂಕುಗಳಲ್ಲಿ ಮಡಿಕಟ್ಟೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲು ಸರ್ಕಾರದ ಜತೆ ಮಾತುಕತೆ ನಡೆಸಲಾಗುವುದು ಎಂದು ಭರವಸೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ

# ಮತದಾನಕ್ಕೆ ಕಾರ್ಯಕ್ಕೆ 9904 ಸಿಬ್ಬಂದಿ ನೇಮಕ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಏಪ್ರಿಲ್ 26ರಂದು ಮತದಾನ ಜರುಗಲಿದೆ. ಲೋಕಸಭಾ ಕ್ಷೇತ್ರದ 8 ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ 1856876 ಮತದಾರರು ಇದ್ದು, 2168 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತದಾನದ ಕಾರ್ಯಕ್ಕೆ 9904 ಅಧಿಕಾರಿ ಹಾಗೂ ಸಿಬ್ಬಂದಿ ನೇಮಕ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಮತದಾನ ಸಿದ್ಧತೆ ಕುರಿತು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಚುನಾವಣಾ ಕಣದಲ್ಲಿ 18 ಪುರುಷ ಹಾಗೂ 2 ಮಹಿಳೆಯರು ಸೇರಿ 20 ಅಭ್ಯರ್ಥಿಗಳು ಇದ್ದಾರೆ. ಒಂದು ಬ್ಯಾಲೆಟ್ ಯುನಿಟ್‍ನಲ್ಲಿ 16 ಅಭ್ಯರ್ಥಿಗಳ ವಿವರ ನಮೂದು ಮಾಡಬಹುದಾಗಿದೆ. ಹಾಗಾಗಿ ಈ ಬಾರಿಯ ಮತದಾನದಲ್ಲಿ 2 ಬ್ಯಾಲೆಟ್ ಯುನಿಟ್‍ಗಳು ಇರಲಿವೆ. 20 ಅಭ್ಯರ್ಥಿಗಳು ಒಂದು ನೋಟಾ ಸೇರಿ 21 ವಿವರಗಳನ್ನು ಬ್ಯಾಲೆಟ್ ಯುನಿಟ್‍ನಲ್ಲಿ ನಮೂದು ಮಾಡಲಾಗುವುದು. 2168 ಮತಗಟ್ಟೆಗಳಿಗೆ 4336 ಬ್ಯಾಲೆಟ್ ಯುನಿಟ್, 2168 ಕಂಟ್ರೋಲ್ ಯುನಿಟ್ ಹಾಗೂ ವಿವಿಪ್ಯಾಟ್‍ಗಳು ಬಳಕೆಯಾಗಿಲಿವೆ.

ಮುಂಜಾಗ್ರತವಾಗಿ 947 ಬ್ಯಾಲೆಟ್ ಯುನಿಟ್, 642 ಕಂಟ್ರೋಲ್ ಯುನಿಟ್ ಹಾಗೂ 745 ವಿವಿಪ್ಯಾಟ್‍ಗಳನ್ನು ಹೆಚ್ಚುವರಿವಾಗಿ ಮೀಸಲು ಇರಿಸಿ ಸದ್ದಪಡಿಸಿಕೊಳ್ಳಲಾಗಿದೆ. ಮತಗಟ್ಟೆಗಳಿಗೆ ನಿಯೋಜನೆಗೊಂಡ 9904 ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಎರಡು ಹಂತದ ತರಬೇತಿ ನೀಡಲಾಗಿದೆ. ಇದರಲ್ಲಿ ಅಗತ್ಯ ಇರುವ ಮತದಾನ ಅಧಿಕಾರಿ ಹಾಗೂ ಸಿಬ್ಬಂದಿ ಬಲಕ್ಕೆ ಅನುಗುಣವಾಗಿ ಶೇ.20 ರಷ್ಟು ಹೆಚ್ಚುವರಿ ಸಿಬ್ಬಂದಿಗೆ ತರಬೇತಿ ನೀಡಿ ಮೀಸಲು ಇರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

**ಮತದಾರರನ್ನು ಆಕರ್ಷಿಸಲು 54 ವಿಶೇಷ ಮತಗಟ್ಟೆಗಳ ಸ್ಥಾಪನೆ:** ಚಿತ್ರದುರ್ಗ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮತದಾರರನ್ನು ಆಕರ್ಷಿಸಲು 54 ವಿಶೇಷ ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ. ಮಹಿಳಾ ಮತದಾರರನ್ನು ಉತ್ತೇಜಿಸಲು ಪ್ರತಿ ವಿಧಾನಸಭಾವಾರು ಮಹಿಳಾ ಮತದಾರರು ಹೆಚ್ಚಿರುವ 5 ಕಡೆ ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ ಮತಗಟ್ಟೆಗಳಲ್ಲಿ ಮಹಿಳಾ ಅಧಿಕಾರಿ ಹಾಗೂ ಸಿಬ್ಬಂದಿ ಚುನಾವಣಾ ಕಾರ್ಯ ನಿರ್ವಹಿಸಲಿದ್ದಾರೆ.

ಇದೇ ಮಾದರಿಯಲ್ಲಿ ಪ್ರತಿ ವಿಧಾನ ಸಭಾವಾರು 6 ವಿಶೇಷ ಚೇತನ, ಯುವ, ವಿಷಯಾಧಾರಿತ ಹಾಗೂ ಸ್ಥಳೀಯ ಇತಿಹಾಸ ಪರಂಪರೆ, ಸಂಸ್ಕೃತಿ ಬಿಂಬಿಸುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಚುನಾವಣಾ ಆಯೋಗದಿಂದ ಬಿಸಿಲಾಘಾತ ಹಾಗೂ ಕೋವಿಡ್ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶನವಿದೆ. ಮತಗಟ್ಟೆಗಳಲ್ಲಿ ತೆಂಗಿನ ಚಪ್ಪರ ಹಾಗೂ ಶಾಮೀಯಾನ ಹಾಕಿ ನೆರಳಿನ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು.

**1167 ಮತಗಟ್ಟೆಗಳ ವೆಬ್ ಕಾಸ್ಟಿಂಗ್:** ಚುನಾವಣಾ ಆಯೋಗದ ನಿರ್ದೇಶನದಂತೆ ಕೇಂದ್ರ ಸರ್ಕಾರ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 368 ಅಧಿಕಾರಿಗಳಿಗೆ ತರಬೇತಿ ನೀಡಿ, 8 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮೈಕ್ರೋ ಅಬ್ಸರ್‍ವರ್‍ಗಳಾಗಿ ನೇಮಕ ಮಾಡಲಾಗಿದೆ. ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಒಟ್ಟು ಮತಗಟ್ಟೆಗಳ ಪೈಕಿ ಶೇ.50 ರಷ್ಟು ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಮಾಡಬೇಕು. ಇದರ ಅನುಸಾರ ಕ್ಷೇತ್ರದ 1167 ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಮಾಡಲಾಗುವುದು. ಈ ವೆಬ್ ಕಾಸ್ಟಿಂಗ್‍ನ್ನು ಜಿಲ್ಲಾ ಹಂತದ ಕಂಟ್ರೋಲ್ ರೂಮ್, ರಾಜ್ಯ ಹಾಗೂ ಕೇಂದ್ರ ಚುನಾವಣಾ ಆಯೋಗದ ಕಂಟ್ರೋಲ್ ರೂಮ್‍ಗಳ ಮೂಲಕ ವೀಕ್ಷಣೆ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು.

ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜು ಹೊಸ ಕಟ್ಟಡದಲ್ಲಿ ಮತ ಎಣಿಕೆ ಕೇಂದ್ರ: ಪ್ರತಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಸ್ಟರಿಂಗ್ ಹಾಗೂ ಡಿ ಮಸ್ಟರಿಂಗ್ ಕೇಂದ್ರಗಳನ್ನು ತೆರೆಯಲಾಗಿದೆ. ಏಪ್ರಿಲ್ 25 ರಂದು ಅಂತಿಮ ಹಂತದ ಮತದಾನ ಯಂತ್ರಗಳ ಯಾಧೃಚ್ಛೀಕರಣ (ರ್ಯಾಂಡಮೈಜೇಷನ್) ಜರುಗಲಿದೆ.

ಮತದಾನ ನಂತರ ಡಿ ಮಸ್ಟರಿಂಗ್ ಕೇಂದ್ರಗಳಲ್ಲಿ ಮತದಾನ ಯಂತ್ರಗಳನ್ನು ಸಂಗ್ರಹಿಸಿ ಭದ್ರಪಡಿಸಿ, ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಹೊಸ ಕಟ್ಟಡದಲ್ಲಿ ಸ್ಥಾಪಿಸಲಾಗಿರುವ ಸ್ಟ್ರಾಂಗ್‍ರೂಮ್‍ಗೆ ಕಳುಹಿಸಿಕೊಡಲಾಗುತ್ತದೆ. ಜೂನ್ 4 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉಪಸ್ಥಿತರಿದ್ದರು.



### ಕ್ಷೇತ್ರ ತೊರೆಯಲು ಸೂಚನೆ

ಮತದಾನ ಮುಕ್ತಾಯಗೊಳ್ಳುವ 48 ಗಂಟೆಗಳ ಮೊದಲು ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದೆ. ನಂತರ ರಾಜಕೀಯ ಪಕ್ಷದ ಅಭ್ಯರ್ಥಿಗಳು ಹಾಗೂ ಪಕ್ಷದವರು ಮನೆ ಮನೆ ಪ್ರಚಾರ ನಡೆಸಬಹುದು. ಕಾನೂನು ಸುವ್ಯವಸ್ಥೆ ಪಾಲನೆಗಾಗಿ ಕ್ಷೇತ್ರದ ಮತಾದರರು ಅಲ್ಲದವರು ಕ್ಷೇತ್ರ ಬಿಡಲು ಸೂಚನೆ ನೀಡಲಾಗಿದೆ. ಮತದಾನದ ದಿನ ಸಾರ್ವತ್ರಿಕ ರಜೆ, ಏಪ್ರಿಲ್ 24ರ ಸಂಜೆ 6 ಗಂಟೆಯಿಂದ 26ರ ಸಂಜೆ 12 ಗಂಟೆಯವರೆಗೆ ಮದ್ಯ ಮಾರಾಟ ನಿಷೇಧ, ಜಾತ್ರೆ ಉತ್ಸವಗಳನ್ನು ನಿಷೇಧ ಹಾಗೂ ಸಿ.ಆರ್.ಪಿ.ಸಿ ಕಲಂ 144 ಅಡಿ ಪ್ರತಿಬಂಧಕಾಜ್ಞೆ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

### ಕಂಟ್ರೋಲ್ ರೂಂ ಸ್ಥಾಪನೆ

ಚುನಾವಣೆ ಹಿನ್ನಲೆಯಲ್ಲಿ ಜಿಲ್ಲಾ ಹಾಗೂ ವಿಧಾನಸಭಾ ಕ್ಷೇತ್ರವಾರು ಕಂಟ್ರೋಲ್ ರೂಂಗಳನ್ನು ತರೆಯಲಾಗಿದೆ. ಚುನಾವಣೆ ಅಕ್ರಮಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಕಂಟ್ರೋಲ್ ರೂಮ್ ಸಂಖ್ಯೆ 1950 ಹಾಗೂ ಮೊಳಕಾಲ್ಮೂರು (08198-229234) ಚಳ್ಳಕೆರೆ (08195-295095), ಚಿತ್ರದುರ್ಗ (08194-222416), ಹಿರಿಯೂರು(08193-263226) ಹೊಸದುರ್ಗ(08199-295058), ಹೊಳಲ್ಕೆರೆ (08191-200013) ಸಾರ್ವಜನಿಕರು ಕರೆ ಮಾಡಬಹದು. ಚುನಾವಣೆ ಆಯೋಗದಿಂದ ಮತದಾನಕ್ಕೆ ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ. ಎಲ್ಲಾ ಅರ್ಹ ಮತದಾರರು ತಪ್ಪದೇ ಮತಗಟ್ಟೆಗಳಿಗೆ ಆಗಮಿಸಿ ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕೋರಿದ್ದಾರೆ.

### 8 ಜನ ಗಡಿಪಾರು, 3300 ಪೊಲೀಸರ ನೇಮಕ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಮಾತನಾಡಿ, ಮತದಾನ ಶಾಂತಿಯುತವಾಗಿ ನಡೆಸುವ ಸಲುವಾಗಿ ಪೊಲೀಸ್ ಇಲಾಖೆಯಿಂದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮುಂಜಾಗ್ರತ ಕ್ರಮವಾಗಿ ಜಿಲ್ಲೆಯ 1808 ಜನರ ವಿರುದ್ಧ ಕಾನೂನು ಪ್ರಕ್ರಿಯೆ ಜರುಗಿಸಿ ತಹಶೀಲ್ದಾರ್ ಹಾಗೂ ಉಪವಿಭಾಗಾಧಿಕಾರಿಗಳ ಎದುರಿಗೆ ಮುಚ್ಚಳಿಕೆ ಬರೆಸಿಕೊಳ್ಳಲಾಗಿದೆ. 8 ಜನರಿಗೆ ಗಡಿಪಾರು ಮಾಡಲಾಗಿದೆ.3300 ಪೊಲೀಸ್ ಸಿಬ್ಬಂದಿಗಳನ್ನು ಮತದಾನ ಕಾರ್ಯಕ್ಕೆ ನಿಯೋಜಿಸಲಾಗಿದೆ. ಇದರಲ್ಲಿ 950 ಗೃಹ ರಕ್ಷಕರು, 6 ಕೆ.ಎಸ್.ಆರ್.ಪಿ.ಸಿ ತುಕಡಿ ಹಾಗೂ ಸಿ.ಆರ್.ಪಿ.ಎಫ್ ತುಕಡಿಗಳು ಇರಲಿವೆ. ಜಿಲ್ಲೆಯಲ್ಲಿ 280 ಸೂಕ್ಷ ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಇಲ್ಲಿ ಇಬ್ಬರು ಪೊಲೀಸ್ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ನಿಯೋಜಿಸಲಾಗುವುದು. ಉಳಿದಂತೆ ಪ್ರತಿ ಮತಗಟ್ಟೆ ಒರ್ವ ಪೊಲೀಸ್ ಸಿಬ್ಬಂದಿ ಇರಲಿದ್ದಾರೆ. ಮತದಾನ ತರುವಾಯ ಸ್ಟ್ರಾಂಗ್ ರೂಮ್ ಹಾಗೂ ಮತ ಎಣಿಕೆ ದಿನ ಮತ ಎಣಿಕೆ ಕೇಂದ್ರಗಳನ್ನು ಪೊಲೀಸ್ ಭದ್ರತೆ ಒದಗಿಸಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ತಿಳಿಸಿದರು.

# ಎನ್‍ಡಿಎ ಬೆಂಬಲಿಸಿದ ಕಾಡುಗೊಲ್ಲರ ಸಂಘ

» ಚಿತ್ರದುರ್ಗ

ಕಾಡುಗೊಲ್ಲ ಜನಾಂಗವನ್ನು ಎಸ್.ಟಿ. ಮೀಸಲಾತಿಗೆ ಸೇರಿಸುವ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಕೂಟದ ನಾಯಕರು ಭರವಸೆಯನ್ನು ನೀಡಿದ್ದರ ಹಿನ್ನಲೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯ ಗೆಲುವಿಗೆ ಶ್ರಮವಹಿಸಲಾಗುವುದೆಂದು ಕರ್ನಾಟಕ ರಾಜ್ಯ ಕಾಡುಗೊಲ್ಲರ ಸಂಘದ ರಾಜ್ಯಾಧ್ಯಕ್ಷರಾದ ರಾಜಣ್ಣ ತಿಳಿಸಿದರು.

ಚಿತ್ರದುರ್ಗ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕಾಡುಗೊಲ್ಲ ಜನಾಂಗವನ್ನು ಎಸ್.ಟಿ.ಗೆ ಸೇರಿಸಬೇಕೆಂದು ಕಳೆದ 70 ವರ್ಷದಿಂದ ಹೋರಾಟವನ್ನು ಮಾಡಲಾಗುತ್ತಿದೆ. ಅದರೆ ಇದಕ್ಕೆ ಯಾರೂ ಸಹಾ ಸರಿಯಾದ ರೀತಿಯಲ್ಲಿ ಸ್ಪಂದಿಸಿಲ್ಲ ಅಲ್ಲದೆ ನಮವರ ಪರವಾಗಿ ಯಾವ ನಾಯಕರು ಸಹಾ ಧ್ವನಿಯನ್ನು ಎತ್ತಿಲ್ಲ, ಈ ಹಿನ್ನಲೆಯಲ್ಲಿ ನಮ ಮೀಸಲಾತಿ ಹಿಂದೆ ಉಳಿದಿದೆ. ನಮ್ಮ ಜನಾಂಗದ ಕುಲಶಾಸ್ತ್ರ ಅಧ್ಯಯನವನ್ನು ಮಾಡಿಸಿದ್ದು, ಕೇಂದ್ರಕ್ಕೆ ನಮ್ಮ ಜನಾಂಗವನ್ನು ಎಸ್.ಟಿ.ಗೆ ಸೇರಿಸುವಂತೆ ಕೇಂದ್ರಕ್ಕೆ ಫೈಲನ್ನು ಕಳುಸಿದ್ದು ಅದರೆ ಅಲ್ಲಿ ನಮ್ಮ ಪರವಾಗಿ ಯಾರು ಮಾತನಾಡುವವರು ಯಾರೂ ಇರದಿದ್ದ ಪರಿಣಾಮ ಅಲ್ಲದೆ ರಾಜ್ಯ ಸರ್ಕಾರ ಕಳುಸಿದ ಫೈಲ್‍ನಲ್ಲಿ ಕೆಲವು ತಾಂತ್ರಿಕ ತೊಂದರೆಯಿಂದ ಅದು ವಾಪಾಸ್ಸು ಬಂದಿದೆ ಈ ಫೈಲನ್ನು ಮತ್ತೇ ರಾಜ್ಯ ಸರ್ಕಾರದಿಂದ ಸರಿಪಡಿಸಿ ಕೇಂದ್ರಕ್ಕೆ ಕಳುಹಿಸಲಾಗಿತ್ತು, ಈ ಸಮಯದಲ್ಲಿ ಕೇಂದ್ರ ಸಚಿವರಾದ ನಾರಾಯಣಸ್ವಾಮಿಯವರು ಸಹಾ ನಮ್ಮ ಪರವಾಗಿ ಕೆಲಸವನ್ನು ಮಾಡುವುದರ ಮೂಲಕ ಕಾಡುಗೊಲ್ಲ ಜನಾಂಗವನ್ನು ಎಸ್.ಟಿ.ಗೆ ಸೇರಿಸುವ ಬಗ್ಗೆ ಪರಿಶ್ರಮವನ್ನು ಹಾಕಿದ್ದಾರೆ ಎಂದರು.



2014ರಲ್ಲಿ ನಮ್ಮ ಜನಾಂಗವನ್ನು ಎಸ್.ಟಿ.ಗೆ ಸೇರಿಸುವಂತೆ ಆಗ್ರಹಿಸಿ ಕೇಂದ್ರಕ್ಕೆ ರಾಜ್ಯ ಸರ್ಕಾರ ಶಿಫಾರಸ್ಸು ಮಾಡಿನ ಕಳುಹಿಸಲಾಯಿತು. ಆದರೆ ಅಲ್ಲಿ ನಮ್ಮ ಪರವಾಗಿ ಮಾತನಾಡುವವರು ಯಾರು ಇಲ್ಲದಿದ್ದರ ಪರಿಣಾಮವಾಗಿ ನಮ್ಮ ಬೇಡಿಕೆ ಬೇಡಿಕೆಯಾಗಿಯೇ ಉಳಿಯಿತು, ತದ ನಂತರ ನಮ್ಮ ಜನಾಂಗದವರ ಬಗ್ಗೆ ಮಾಜಿ ಪ್ರದಾನ ಮಂತ್ರಿಗಳು ಆಸಕ್ತಿಯನ್ನು ತೋರಿಸಿದ್ದರ ಪರಿಣಾಮವಾಗಿ ಈಗ ನಮ್ಮ ಜನಾಂಗದ ಬೇಡಿಕೆ ಈಡೇರುವ ಕಾಲ ಬಂದಿದೆ ಎನ್ನಲಾಗಿದೆ ಈ ಹಿನ್ನಲೆಯಲ್ಲಿ ಈ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಲ್ಲಿ ನಮಗೆ ಭರವಸೆ ಬಂದಿದೆ ಈ ಹಿನ್ನಲೆಯಲ್ಲಿ ಈ ಚುನಾವಣೆಯಲ್ಲಿ ಎನ್.ಡಿ.ಎ. ಮೈತ್ರಿಕೂಟದ ಅಭ್ಯರ್ಥಿಯನ್ನು ಬೆಂಬಲಿಸಲಾಗುವುದು ಎಂದು ರಾಜಣ್ಣ ತಿಳಿಸಿದರು.

### ಭಯೋತ್ಪಾದನೆ ಮುಕ್ತ ದೇಶಕ್ಕೆ ಬಿಜೆಪಿ ಬೆಂಬಲಿಸಿ: ಪ್ರದೀಪ್



**ಹೊಸದುರ್ಗ:** ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ಭಯೋತ್ಪಾದನೆ ಚಟುವಟಿಕೆಗಳು ಬಹಳಷ್ಟು ವಿರಳವಾಗಿವೆ. ಪ್ರಧಾನಿ ನರೇಂದ್ರ ಮೋದಿಜಿ, ಗೃಹ ಸಚಿವ ಅಮಿತ್ ಶಾ ಭಯೋತ್ಪಾದಕರನ್ನು ಎಡೆಮುರಿ ಕಟ್ಟುತ್ತಿದ್ದಾರೆ. ಸಂಪೂರ್ಣವಾಗಿ ಭಯೋತ್ಪಾದನೆ ಮುಕ್ತ ದೇಶವನ್ನಾಗಿ ಮಾಡಲು ಮತ್ತೊಮ್ಮೆ ಬಿಜೆಪಿಯನ್ನು ಬೆಂಬಲಿಸಿ ಎಂದು ಬಿಜೆಪಿ ಮುಖಂಡ ಸದ್ಗುರು ಪ್ರದೀಪ್ ಹೇಳಿದರು. ತಾಲೂಕಿನ ನಾಕೀಕೆರೆ, ಕಿಟ್ಟದಹಳ್ಳಿ, ಶೀರನಕಟ್ಟೆ, ದಾಸಜ್ಜನಹಟ್ಟಿ, ಲಕ್ಕಿಹಳ್ಳಿ ಹಾಗೂ ಇನ್ನಿತರ ಗ್ರಾಮಗಳಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಪರವಾಗಿ ಸೋಮವಾರ ಮತಯಾಚನೆ ಮಾಡಿ ಅವರು ಮಾತನಾಡಿದರು. ನರೇಂದ್ರ ಮೋದಿಜಿ ಅವರು ದೇಶದ ಪ್ರಧಾನ ಮಂತ್ರಿ ಆದಮೇಲೆ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತ ದೇಶ ಬಹಳ ಹೆಸರಾಗಿದೆ ಎಂದರು.

## ಪ್ರಮುಖ ಸುದ್ದಿ

ಮತದಾನ ಸಿಬ್ಬಂದಿಗಳಿಗೆ 2ನೇ ಹಂತದ ತರಬೇತಿಗೆ ಚುನಾವಣಾ ವೀಕ್ಷಕರ ಸಮ್ಮುಖದಲ್ಲಿ ರ್‍ಯಾಂಡಮೈಜೇಷನ್

# 7784 ಸಿಬ್ಬಂದಿಗಳಿಗೆ ನೇಮಕಾತಿ ಆದೇಶ ಜಾರಿ

» ದಾವಣಗೆರೆ

ಲೋಕಸಭಾ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ಮತಗಟ್ಟೆ ಸಿಬ್ಬಂದಿಗೆ ಎರಡನೇ ಹಂತದ ತರಬೇತಿಗೆ ಹಾಜರಾಗಲು ಚುನಾವಣಾ ಸಾಮಾನ್ಯ ವೀಕ್ಷಕರಾದ ಎಂ.ಲಶ್ಮಿ ಅವರ ಸಮ್ಮುಖದಲ್ಲಿ ಏಪ್ರಿಲ್ 20 ರಂದು ಎರಡನೇ ಯಾರ್ಂಡಮೈಜೇಷನ್‍ನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಕೈಗೊಂಡರು.

ದಾವಣಗೆರೆ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರಗಳ 1693 ಮತಗಟ್ಟೆಗಳು ಸೇರಿದಂತೆ ವಿಜಯನಗರ ಜಿಲ್ಲೆ ಹರಪನಹಳ್ಳಿ ವಿಧಾನಸಭಾ ಕ್ಷೇತ್ರದ 253 ಮತಗಟ್ಟೆಗಳು ಸೇರಿ 1946 ಮತಗಟ್ಟೆಗಳು ದಾವಣಗೆರೆ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರಲಿವೆ.

ಈಗಾಗಲೇ ಮತಗಟ್ಟೆ ಮಟ್ಟದ ಅಧ್ಯಾಕ್ಷಾಧಿಕಾರಿ ಹಾಗೂ ಸಹಾಯಕ ಅಧ್ಯಕ್ಷಾಧಿಕಾರಿಗಳಿಗೆ ಆಯಾ ತಾಲ್ಲೂಕಿನಲ್ಲಿ ಮೊದಲ ಹಂತದ ತರಬೇತಿಯನ್ನು ಏಪ್ರಿಲ್ 8 ರಂದು ನೀಡಲಾಗಿರುತ್ತದೆ. ಎರಡನೇ ಹಂತದ ತರಬೇತಿಗೆ ಮತಗಟ್ಟೆ ಅಧ್ಯಕ್ಷಾಧಿಕಾರಿ, ಸಹಾಯಕ ಅಧ್ಯಕ್ಷಾಧಿಕಾರಿ, ಮತಗಟ್ಟೆ ಸಿಬ್ಬಂದಿಗಳನ್ನು ವಿಧಾನಸಭಾ ಕ್ಷೇತ್ರವಾರು ಆಯ್ಕೆ ಮಾಡುವ ವಿಧಾನವೇ ಎರಡನೇ ಹಂತದ ಯಾರ್ಂಡಮೇಜೇಸನ್ ಆಗಿರುತ್ತದೆ.



ಮತಗಟ್ಟೆ ಅಧ್ಯಕ್ಷಾಧಿಕಾರಿ ಹಾಗೂ ಸಹಾಯಕ ಅಧ್ಯಕ್ಷಾಧಿಕಾರಿಗಳನ್ನು ಒಂದು ವಿಧಾನಸಭಾ ಕ್ಷೇತ್ರದಿಂದ ಜಿಲ್ಲೆಯೊಳಗೆ ಇನ್ನೊಂದು ವಿಧಾನಸಭಾ ಕ್ಷೇತ್ರಕ್ಕೆ ನೇಮಕ ಮಾಡಲಾಗುತ್ತದೆ. ಎರಡನೇ ಹಂತದ ತರಬೇತಿಗೆ ನೇಮಕ ಮಾಡಲಾದ ವಿಧಾನಸಭಾ ಕ್ಷೇತ್ರಕ್ಕೆ ತೆರಳಿ ತಂಡದೊಂದಿಗೆ ತರಬೇತಿ ಪಡೆಯಬೇಕಾಗುತ್ತದೆ.

ಏಪ್ರಿಲ್ 30 ರಂದು ಎರಡನೇ ಹಂತದ ತರಬೇತಿ; ಎರಡನೇ ಹಂತದ ರ್‍ಯಾಂಡ್‍ಮೈಜೇಷನ್ ನಡೆಸಲಾಗಿದ್ದು ಎಲ್ಲಾ ಮತಗಟ್ಟೆ ಸಿಬ್ಬಂದಿಗಳಿಗೆ ಏಪ್ರಿಲ್ 30 ರಂದು ಬೆಳಗ್ಗೆ 10 ಗಂಟೆಯಿಂದ ತರಬೇತಿಯನ್ನು ಆಯೋಜಿಸಲಾಗಿದೆ. ಈ ತರಬೇತಿಗೆ ಒಂದು ತಾಲ್ಲೂಕಿನಿಂದ ನೇಮಕವಾದ ತಾಲ್ಲೂಕಿಗೆ ತೆರಳಲು ಸಿಬ್ಬಂದಿಗಳಿಗೆ ಆಯಾ ವಿಧಾನಸಭಾಕ್ಷೇತ್ರದ ಮಸ್ಟರಿಂಗ್ ಕೇಂದ್ರದ ಬಳಿಯಿಂದ ಬೆಳಗ್ಗೆ 6 ಗಂಟೆಯಿಂದ ವಾಹನದ ವ್ಯವಸ್ಥೆಯನ್ನು ಮಾಡಲಾಗಿದ್ದು ನೇಮಕವಾದ ಎಲ್ಲಾ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ತರಬೇತಿಯಲ್ಲಿ ಭಾಗವಹಿಸಬೇಕು.

ಸಖಿ, ಯುವ, ವಿಕಲಚೇತನರ ಮತಗಟ್ಟೆ; ಪ್ರತಿ ವಿಧಾನಸಭಾ ಕ್ಷೇತ್ರಗಳಲ್ಲಿ ಮಹಿಳೆಯರಿಂದಲೇ ನಿರ್ವಹಿಸಲ್ಪಡುವ 5 ಸಖಿ ಮತಗಟ್ಟೆಗಳನ್ನು ಮತ್ತು ಪ್ರತಿ ಕ್ಷೇತ್ರದಲ್ಲಿ ತಲಾ ಒಂದರಂತೆ ಯುವ, ವಿಶೇಷಚೇತನರ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದ್ದು ಇಲ್ಲಿ ನಿರ್ವಹಿಸುವ ಸಿಬ್ಬಂದಿಗಳ ನೇಮಕಾತಿ ಯಾರ್ಂಡಮೇಜೇಸನ್ ನೆರವೇರಿಸಲಾಯಿತು.

ವಿಧಾನಸಭಾ ಕ್ಷೇತ್ರವಾರು ನೇಮಕವಾಗಿರುವ ಅಧಿಕಾರಿ, ಸಿಬ್ಬಂದಿಗಳು; ಜಗಳೂರು ಕ್ಷೇತ್ರಕ್ಕೆ ಮತಗಟ್ಟೆ ಅಧ್ಯಕ್ಷಾಧಿಕಾರಿ, ಸಹಾಯಕ ಅಧ್ಯಕ್ಷಾಧಿಕಾರಿ, ಮತದಾನ ಸಿಬ್ಬಂದಿಗಳು ಸೇರಿ 1212, ಹರಿಹರ 1048, ದಾವಣಗೆರೆ ಉತ್ತರ 1128, ದಕ್ಷಿಣ 996, ಮಾಯಕೊಂಡ 1104, ಚನ್ನಗಿರಿ 1172 ಹಾಗೂ ಹೊನ್ನಾಳಿ ವಿಧಾನಸಭಾ ಕ್ಷೇತ್ರಕ್ಕೆ 1124 ಮತಗಟ್ಟೆ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ.

ಈ ವೇಳೆ ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಭಗವಾನ್ ಮಹಾವೀರರ ಆದರ್ಶ ಸರ್ವಕಾಲಕ್ಕೂ ಪ್ರಸ್ತುತ: ತಹಶೀಲ್ದಾರ್ ರೇಹಾನ್‌ಪಾಷ



» **ಚಳ್ಳಕೆರೆ**
ಸಮಾಜದಲ್ಲಿ ನಿರಂತರವಾಗಿ ಜನರಿಗೆ ಘಾತವನ್ನುಂಟು ಮಾಡುತ್ತಿದ್ದ ಮೂಢನಂಬಿಕೆ, ಇತ್ಯಾದಿಗಳನ್ನು ತ್ಯಜಿಸಿ ನೆಮ್ಮದಿಯಿಂದ ದೇವರನ್ನು ಪ್ರಾರ್ಥಿಸಿದರೆ ಮಾತ್ರ ನಾವು ಒಳಿತನ್ನು ಕಾಣಬಹುದಾಗಿದೆ. ಸರ್ವವನ್ನು ತ್ಯಾಗಮಾಡಿ ಮಾನವ ಕಲ್ಯಾಣಕ್ಕಾಗಿ ಶ್ರಮಿಸಿದ ಮಹಾನ್ ತ್ಯಾಗಿ ಭಗವಾನ್ ಮಹಾವೀರರ ಜಯಂತಿ ಕಾರ್ಯಕ್ರಮ ಆಚರಣೆ ನಮ್ಮೆಲ್ಲರಿಗೂ ಹೊಸ ಶಕ್ತಿ ತುಂಬಿದೆ ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.
ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನಾವು ಅನೇಕ ಧಾರ್ಮಿಕ ಮಹಾನ್ ಪುರುಷರ ಜಯಂತಿಯನ್ನು ಆಚರಣೆ ಮಾಡುತ್ತಾ ಬಂದಿದ್ದೇವೆ. ಧಾರ್ಮಿಕ ಜಾಗೃತಿ ಮೂಡಿಸಿದ ಭಗವಾನ್ ಮಹಾವೀರರ ಆದರ್ಶಗಳು ನಮ್ಮೆಲ್ಲರ ಬದುಕಿಗೆ ಸದಾಸ್ಫೂರ್ತಿಯಾಗಿವೆ ಎಂದರು.
ಇದೇ ಸಂದರ್ಭದಲ್ಲಿ ತಾಲ್ಲೂಕು ಜೈನ ಸಮಾಜದ ವತಿಯಿಂದ ಬೆಂಗಳೂರು ರಸ್ತೆಯಲ್ಲಿರುವ ಜೈನ ಕಲ್ಯಾಣ ಮಂಟಪದಲ್ಲಿ ಭಗವಾನ್ ಮಹಾವೀರರ ಜಯಂತಿಯನ್ನು ಆಚರಿಸಲಾಯಿತು. ತಾಲ್ಲೂಕು ಜೈನ ಸಮಾಜದ ಗೌರವಾಧ್ಯಕ್ಷ ಅಂಬಣ್ಣ, ಪ್ರಧಾನ ಕಾರ್ಯದರ್ಶಿ ಡಿ.ಭರತ್‌ರಾಜ್, ಸಂಘಟನಾ ಕಾರ್ಯದರ್ಶಿ ಗೌರಿಪುರ ಪಾರ್ಶ್ವನಾಥ, ಕಾರ್ಯದರ್ಶಿ ಡಾ.ವಿಜಯೇಂದ್ರ, ನಿರ್ದೇಶಕರಾದ ಡಿ.ಪ್ರಭಾಕರ, ನವೀನ್, ಚೈತನ್‌ಜೈನ್, ರಾಜೇಶ್‌ಜೈನ್, ದರ್ಶನ್‌ಜೈನ್, ಮುಕ್ತ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಾಧಿಕಾರಿ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ಭವ್ಯವಾಗಿ ಜರುಗಿದ ಹೊನ್ನೇನಹಳ್ಳಿ ಶ್ರೀ ಆಂಜನೇಯಸ್ವಾಮಿ ದೇವರ ರಥೋತ್ಸವ



» **ಹೊಸದುರ್ಗ**
ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದಲ್ಲಿ ಶ್ರೀ ರಾಮನವಮಿಯ ಅಂಗವಾಗಿ ಶ್ರೀ ಆಂಜನೆಯ ಸ್ವಾಮಿಯವರ ರಥೋತ್ಸವವು ಸಾವಿರಾರು ಭಕ್ತರ ಸಮ್ಮನುಖದಲ್ಲಿ ಅತ್ಯಂತ ಸಡಗರ ಸಂಭ್ರಮಗಳಿಂದ ಅದ್ದೂರಿಯಾಗಿ ಜರುಗಿತು.ಭವ್ಯವಾದ ಸ್ವಾಮಿಯ ರಥವನ್ನು ಮಂಗಳ ದ್ರವ್ಯಗಳಿಂದ ಹಾಗೂ ವರ್ಣರಂಜಿತ ಪುಷ್ಪ ಮತ್ತು ರಂಗುರಂಗಿನ ವಸ್ತ್ರಗಳಿಂದ ಶೃಂಗರಿಸಿ ಕಳಸ ಸ್ಥಾಪನೆ ಮಾಡಲಾಗಿತ್ತು.ರಥದ ಸುತ್ತ ಹಸಿರು ತಳಿರು ತೋರಣಗಳಿಂದ ಚಿತ್ತಾಕರ್ಷಕವಾಗಿ ಆಲಂಕರಿಸಲಾಗಿತ್ತು. ರಥೋತ್ಸವದ ಅಂಗವಾಗಿ ಇಡೀ ಗ್ರಾಮದಲ್ಲೆ ವೈವಿಧ್ಯಮಯ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿತ್ತು, ಜಾನಪದ ವಾದ್ಯಗಳ ನೀನಾದದೊಂದಿಗೆ ದೇವರ ಸನ್ನಿಧಿಯಲ್ಲಿ ರಥಾರೋಹಣ ಮಾಡಿದರು.ಈ ದೃಶ್ಯವನ್ನ ನೋಡಲು ನೆರದಿದ್ದ ಭಕ್ತರು ನೂಕು ನೂಕಲಿನಲ್ಲೆ ಮುಗೆಬೀಳುತ್ತಿದ್ದರು ಜಾತ್ರೆಯ ಮುಖ್ಯ ಆಕರ್ಷಣೀಯ ಕೇಂದ್ರಬಿಂದು ಶ್ರೀ ಸೋಮದೇವರ ಸಂಬ್ರಮದ ಕುಣಿತ ಜರುಗಿತು,ಊರುಮೆ,ದೋಣ ೧,ಹಲಗೆ,ಓಲಗ,ಕಹಳೆಯ ಬಡಿತಕ್ಕೆ ಶ್ರೀ ಸೋಮನ ಲಯಬದ್ದ ಕುಣಿತ ಜನಮನ ಸೂರೆಗೊಂಡಿತು. ಜಾನಕಲ್ಲು, ಕಂತಾಪುರ, ನರಸೀಪುರ, ನಾಗತಿಹಳ್ಳಿ, ಕೋಡಿಹಳ್ಳಿ,ಬನಸೀಹಳ್ಳಿ ಸೇರಿದಂತೆ ಸುತ್ತ ಮುತ್ತಲಿನ ಗ್ರಾಮಗಳಿಂದ ಬಂದಿದ್ದ ಅಪಾರ ಸಂಖ್ಯೆಯಲ್ಲಿ ಕಿಕ್ಕಿರಿದು ಸೇರಿದ್ದ ಜನಸ್ತೋಮ ರಥ ಎಳೆದ ನಂತರ ಆಭರಣಾಲಂಕೃತ ದೇವರ ಪಲ್ಲಕ್ಕಿ ಉತ್ಸವ ಗ್ರಾಮದ ರಾಜಬೀದಿಗಳಲ್ಲಿ ಮೆರವಣಿಗೆ ಜರುಗಿತು. ಉತ್ಸವದುದ್ದಕ್ಕೂ ಶ್ರೀ ಸೋಮನ ಕುಣಿತ ಮುಂದುವರೆದಿತ್ತು, ಸಂಪ್ರದಾಯದಂತೆ ಶ್ರದ್ಧಾ ಭಕ್ತಿಯಿಂದ ನಡೆದ ರಥೋತ್ಸವದಲ್ಲಿ ಸಹಸ್ರಾರು ಭಕ್ತರು ತೇರು ಎಳೆದು ಪುನೀತರಾದರು.

# ನೇಹಾ ಹತ್ಯೆ ಖಂಡಿಸಿ ಬಿಜೆಪಿ ಪ್ರತಿಭಟನೆ





» **ಚಿತ್ರದುರ್ಗ**
ನೇಹಾ ಹಿರೇಮಠ ಹತ್ಯೆ ಖಂಡಿಸಿ ನಗರದಲ್ಲಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ನಗರದ ನೀಲಕಂಠೇಶ್ವರ ದೇವಾಲಯದಿಂದ ಪ್ರಾರಂಭವಾದ ಮೆರವಣಿಗೆಯೂ ಜಿಲ್ಲಾಧಿಕಾರಿಗಳ ಕಚೇರಿಯತ್ತ ಸಾಗುತ್ತಿದ್ದಾಗ ಪೊಲೀಸರು ಪ್ರತಿಭಟನಾಕಾರರನ್ನು ಪ್ರವಾಸಿ ಮಂದಿರದ ಬಳಿ ತಡೆಯೊಡ್ಡಿದರು, ದಾರಿಯುದ್ದಕ್ಕೂ ಸಹಾ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು.
ಶಾಸಕ ಎಂಚಂದ್ರಪ್ಪ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ದೇಶ ವಿರೋಧಿ, ಹಿಂದೂ ವಿರೋಧಿ ಚಟುವಟಿಕೆ ಹೆಚ್ಚಾಗಿ ಶಾಂತಿ ಸೌಹಾರ್ದತೆಕದಡುತ್ತಿದೆ.ಭಯೋತ್ಪಾದಕತೆ ಹೆಚ್ಚಾಗುತ್ತಿದೆ. ಹಿಂದೂಗಳ ಮೇಲೆ ದಬ್ಬಾಳಿಕೆ, ಕೊಲೆಯಂತಹ ಪ್ರಕರಣಗಳು ಮರುಕಳಿಸುತ್ತಿವೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರಿದರು.
ನೇಹಾಳನ್ನು ಹತ್ಯೆ ಮಾಡಿದ ಕೊಲೆಗಾರನನ್ನು ಸಾರ್ವಜನಿಕವಾಗಿ ಶಿಕ್ಷೆ ನೀಡಬೇಕು. ರಾಜ್ಯದಲ್ಲಿ ಇಂತಹ ಹತ್ಯೆಗಳು ಮರುಕಳಿಸದಂತೆ ಸರ್ಕಾರ ಕ್ರಮವಹಿಸಬೇಕು. ಹೆಣ್ಣು ಮಕ್ಕಳ ಗೌರವ ಉಳಿಸುವವರೆಗೂ ಬಿಜೆಪಿ ಪ್ರತಿಭಟನೆ ನಡೆಸುತ್ತಲೇ ಇರುತ್ತದೆ. ಇದರಲ್ಲಿ ನಾವು ರಾಜಕೀಯ ನಡೆಸುವುದಿಲ್ಲ. ಮಹಿಳೆಯರ ಗೌರವಕ್ಕಾಗಿ ಹೋರಾಟ ನಡೆಸುತ್ತಿದ್ದೇವೆ ಎಂದು ತಿಳಿಸಿದರು.
ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ಲವ್ ಜಿಹಾದ್, ಬಲವಂತದ ಮತಾಂತರ ಸೇರಿದಂತೆ ಹಿಂದೂ ವಿರೋಧಿ ಚಟುವಟಿಕೆಗಳು ಉತ್ತರ ಕರ್ನಾಟಕಕ್ಕೂ ವ್ಯಾಪಿಸಿದೆ. ಹಿಂದೂ ಹೆಣ್ಣು ಮಕ್ಕಳನ್ನು ಗುರಿಯಾಗಿಸಿಕೊಂಡು ಹತ್ಯೆ ಮಾಡಲಾಗುತ್ತಿದೆ.
ಇಂತಹ ಪ್ರಕರಣಗಳು ಪದೇ ಪದೇ ಮರುಕಳಿಸುತ್ತಿದ್ದರೂ ಕಾಂಗ್ರೆಸ್ ಸರ್ಕಾರ ಕಣ್ಮುಚ್ಚಿ ಕುಳಿತಿದೆ ಎಂದು ಆರೋಪಿಸಿದರು.
ಮಹಿಳೆಯರು ಸಾಮಾಜಿಕವಾಗಿ, ಆರ್ಥಿಕವಾಗಿ ಸೇರಿದಂತೆ ಎಲ್ಲಾ ರೀತಿಯಲ್ಲಿ ಸಬಲರಾಗಬೇಕೆಂದು ಬಿಜೆಪಿ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ. ಆದರೆ ಕಾಂಗ್ರೆಸ್ ಸರ್ಕಾರ ಹೆಣ್ಣುಮಕ್ಕಳಿಗೆ ಅನುಕೂಲವಾಗುವ ಯೋಜನೆ ಜಾರಿ ಮಾಡುತ್ತಿಲ್ಲ ಎಂದು ಗುಡುಗಿ ಹತ್ತು ವರ್ಷಗಳ ಹಿಂದೆ ಬಿಹಾರದಲ್ಲಿನಡೆಯುತ್ತಿದ್ದ ದೌರ್ಜನ್ಯ ಹಾಗೂ ಅತ್ಯಾಚರದಂತಹ ಘಟನೆಗಳು, ಕರ್ನಾಟಕದಲ್ಲಿಇಂದು ನಡೆಯುತ್ತಿವೆ. ಸರ್ಕಾರ ಬಂದ ಮೇಲೆ, ಎಂಟು ಯುವಕ ಯುವತಿಯರ ಹತ್ಯೆಯಾಗಿದೆ. ಕಾಂಗ್ರೆಸ್ ಸರ್ಕಾರ ಹಿಂದೂಗಳ ರಕ್ಷಣೆ ಮಾಡುವಲ್ಲಿ ವಿಫಲವಾಗಿದೆ ಎಂದರು.
ವಿಧಾನ ಪರಿಷತ್ ಸದಸ್ಯ ಕೆ.ಎಸ ನವೀನ್ ಮಾತನಾಡಿ, ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಸುವ್ಯವಸ್ಥೆ ತುಂಬ ಹದಗೆಟ್ಟಿದೆ. ರಾಜ್ಯದಲ್ಲಿ ಹಿಂದು ಹೆಣ್ಣುಮಕ್ಕಳಿಗೆ ರಕ್ಷಣೆ ಇಲ್ಲದಂತಾಗಿದೆ. ನೇಹಾ ಹತ್ಯೆ ವಿಚಾರವಾಗಿ ಕಾಂಗ್ರೆಸ್ ಸರ್ಕಾರ ನ್ಯಾಯ ಸಮ್ಮತವಾದ ಹೇಳಿಕೆ ನೀಡುತ್ತಿಲ್ಲ. ಕಾಂಗ್ರೆಸ್ ಕಾರ್ಪೊರೇಟ್ ಮಗಳಿಗೆ ಈ ಪರಿಸ್ಥಿತಿ ಬಂದರೆ ಇನ್ನೂ ರಾಜ್ಯದ ಹೆಣ್ಣು ಮಕ್ಕಳ ಪರಿಸ್ಥಿತಿ ಏನಾಗಬಹುದು ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.
ಕೊಲೆ ಹಿಂದೆ ಷಡ್ಯಂತ್ರ ನಡೆದಿದ್ದು ಇದನ್ನು ಸಿಬಿಐ ತನಿಖೆಗೆ ಒಳಪಡಿಸಬೇಕು. ಕೊಲೆ ಆರೋಪಿಯಾದ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಬೇಕು ರಾಜ್ಯದಲ್ಲಿ ಹಿಂದು ಮುಸ್ಲಿಂ ಸಹೋದರರಂತೆ ಇದ್ದೇವೆ..ಆದರೆ ಕೆಲ ಮುಸ್ಲಿಂ ಯುವಕರಿಗೆ ಲವ್ ಜಿಹಾದ್ ಬಗ್ಗೆ ತಲೆಗೆ ತುಂಬುತ್ತಿದ್ದು,ಜಿಹಾದಿ ಮನಸ್ಥಿತಿಯವರನ್ನು ಗುಂಡಿಕ್ಕಿ ಕೊಲ್ಲಬೇಕು,ರಾಜ್ಯದಲ್ಲಿ ಶಾಂತಿ ನೆಲೆಸಬೇಕು ಎಂದು ತಿಳಿಸಿದರು.
ವಿಧಾನ ಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ್ ಮಾತನಾಡಿ, ಮಹಿಳೆಯರಿಗೆ ರಕ್ಷಣೆ ನೀಡದ ಸರ್ಕಾರಕ್ಕೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.
ಹುಬ್ಬಳಿಯ ಕಾಂಗ್ರೆಸ್ ಕಾರ್ಪೋರೇಟರ್ ಮಗಳು ನೇಹಾ ಹಿರೇಮಠರನ್ನು ಮತಾಂಧ ಫಯಾಜ್ ಲವ್ ಜಿಹಾದ್ ಕಾರಣಕ್ಕೆ ಹತ್ಯೆ ಮಾಡಿದರೆ, ತನಿಖೆಗೆ ಮೊದಲೇ ರಾಜ್ಯದ ಮುಖ್ಯಮಂತ್ರಿಗಳು, ಗೃಹಸಚಿವರಿಂದ ಪ್ರೇಮ್ ಕಹಾನಿ ಎಂದು ಕತೆ ಕಟ್ಟಿ ಪ್ರಕರಣವನ್ನು ದಿಕ್ಕು ತಪ್ಪಿಸುವ ಪ್ರಯತ್ನ ನಡೆಯುತ್ತಿದೆ. ಕಾಂಗ್ರೆಸ್ ಓಲೈಕೆ ರಾಜಕಾರಣಕ್ಕೆ ಕಡಿವಾಣ ಹಾಕಬೇಕಿದೆ. ದುರಾಡಳಿತ ಕೊನೆಗಾಣಿಸೋಣ ಅಮಾಯಕ ಹೆಣ್ಣು ಮಕ್ಕಳ ಜೀವ ಉಳಿಸಬೇಕಿದೆ ಹಲ್ಲೆ, ಕೊಲೆಗಳಿಗೆ ಅಂತ್ಯ ಹಾಡಬೇಕಿದೆ.. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡಲು ಕಾರಣವಾಗಿರುವ ಸಿದ್ದರಾಮಯ್ಯ ನೇತೃತ್ವದ ಹಿಂದೂ ವಿರೋಧಿ ಸರಕಾರವನ್ನು ಖಂಡಿಸಿ ಧಿಕ್ಕರಿಸಬೇಕಿದೆ ಎಂದರು.
ಎನ್‌ಡಿಎ ಅಭ್ಯರ್ಥಿ ಗೋವಿಂದ ಕಾರಜೋಳ ಮಾತನಾಡಿ, ಓಟ್ ಬ್ಯಾಂಕ್ ರಾಜಕಾರಣಕ್ಕಾಗಿ ಹಿಂದೂಗಳ ಹತ್ಯೆಗಾಗಿ ಆರೋಪಿಗಳನ್ನು ರಕ್ಷಣೆ ಮಾಡುವ ಕೆಲಸ ಮಾಡುತ್ತಿದ್ದು, ಇದನ್ನು ಖಂಡಿಸುತ್ತೇವೆ. ಮೋದಿಯವರು ಬಂದ ಮೇಲೆ ದೇಶದಲ್ಲಿ ಭಯೋತ್ಪಾದನೆ ಕಡಿಮೆಯಾಗಿದೆ. ಸಿದ್ದರಾಮಯ್ಯ ಸಿಎಂ ಆದ ಮೇಲೆ ಹಿಂದೂಗಳ ಕಗ್ಗೊಲೆಯಾಗುತ್ತಿವೆ. ಇದನ್ನು ಸಿಬಿಐಗೆ ಕೊಡಬೇಕು ಎಂದು ಒತ್ತಾಯಿಸಿದರು.
ಜಿಲ್ಲಾಧ್ಯಕ್ಷ ಎ.ಮುರುಳಿ, ಮಾಜಿ ಶಾಸಕ ಬೆಳ್ಳುಬ್ಬಿ, ಹನುಮಂತೇಗೌಡ, ಡಾ.ಸಿದ್ದಾರ್ಥ್, ಮಹಿಳಾ ಮೋರ್ಚಾದ ಅಧ್ಯಕ್ಷೆ ಶೈಲಜಾ ರೆಡ್ಡಿ, ಕುಡುಚಿ ಮಾಜಿ ಶಾಸಕ ಪಿ.ರಾಜೀವ್, ನಗರಸಭಾ ಸದಸ್ಯರಾದ ಹರೀಶ್, ಭಾಸ್ಕರ್, ರವಿಶಂಕರ್ ಇದ್ದರು.

## ಸಂಹಿತೆ ಉಲ್ಲಂಘಿಸುವವರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ

» **ಚಿತ್ರದುರ್ಗ**
ಏಪ್ರಿಲ್ 26ರಂದು ನಡೆಯಲಿರುವ ಚಿತ್ರದುರ್ಗ ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಇನ್ನು ಕೆಲವೇ ದಿನಗಳು ಬಾಕಿ ಉಳಿದಿದ್ದು, ಈ ಚುನಾವಣಾ ಕರ್ತವ್ಯಕ್ಕೆ ನಿಯೋಜಿತ ಅಧಿಕಾರಿ-ಸಿಬ್ಬಂಧಿಗಳು ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಂಡು ಮೊಕದ್ದಮೆಗಳನ್ನು ದಾಖಲಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಹೇಳಿದರು.
ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಚುನಾವಣಾ ಸಂಬಂಧಿ ವಿವಿಧ ಸಮಿತಿಗಳ ನೋಡಲ್ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಈವರೆಗೆ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ಅನೇಕ ಪ್ರಕರಣಗಳನ್ನು ಗುರುತಿಸಿ, ಮೊಕದ್ದಮೆಗಳನ್ನು ದಾಖಲಿಸಲಾಗಿದೆ. ಇನ್ನು ಮುಂದಿನ ಕೆಲವು ದಿನಗಳಲ್ಲಿಸಂಭಾವ್ಯನೀತಿಸಂಹಿತೆಉಲ್ಲಂಘನೆಯ ಪ್ರಕರಣಗಳನ್ನು ಗುರುತಿಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ವಿವಿಧ ರಾಜಕೀಯ ಪಕ್ಷಗಳ



ನೇತಾರರು, ಉಮೇದುವಾರರು ತಮ್ಮ ಪಕ್ಷದ ಅಭ್ಯರ್ಥಿಗಳ ಪರವಾಗಿ ಮತಯಾಚಿಸಲು ಭಾರಿ ಬಹಿರಂಗ ಪ್ರಚಾರ ಸಭೆಗಳು, ಕಾರ್ಯಕ್ರಮಗಳು ನಡೆಯುತ್ತಿದ್ದಲ್ಲಿ ಈ ಕಾರ್ಯಕ್ರಮಕ್ಕೆ ಜನರನ್ನು ಕರೆತರಲು ಬಳಸುವ ವಾಹನಗಳು, ಅದಕ್ಕೆ ಹಣ ಪಾವತಿಸುವ ಪಕ್ಷ ಅಥವಾ ಪ್ರತಿನಿಧಿಗಳನ್ನು ಗುರುತಿಸಿ, ಅನುಮತಿ ಪಡೆದಿರುವುದನ್ನು ಖಚಿತಪಡಿಸಿಕೊಂಡು,ತಪ್ಪಿದಲ್ಲಿ ಕಾನೂನು ಕ್ರಮಕ್ಕೆ ಶಿಫಾರಸ್ಸು ಮಾಡುವಂತೆ ಅವರು ಸೂಚಿಸಿದ ಅವರು ಇಂತಹ ವಿಷಯಗಳಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಸಹಕರಿಸುವವರ ವಿರುದ್ಧವೂ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.
ಏಪ್ರಿಲ್ 25ರಂದು ಉಮೇದುವಾರರು ಮನೆಮನೆಗೆ ತೆರಳಿ ಮತ ಯಾಚಿಸಲು ತೆರಳಲಿದ್ದಾರೆ. ಈ ಅವಧಿಯಲ್ಲಿ 10ಕ್ಕಿಂತ ಹೆಚ್ಚು ಜನರಿರದಂತೆ ನೋಡಿಕೊಳ್ಳಬೇಕು. ಜನಸಂಖ್ಯೆ ಹೆಚ್ಚಿದ್ದಲ್ಲಿ ಕ್ರಮಕ್ಕೆ ಶಿಪಾರಸ್ಸು ಮಾಡಬೇಕು. ಅಲ್ಲದೇ ಈ ಅವಧಿಯಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಿಲ್ಲದಂತೆ ಹಾಗೂ ಶಾಂತಿಸುವ್ಯವಸ್ಥೆ ಕಾಪಾಡುವಲ್ಲಿ ವಿಶೇಷ ಗಮನಹರಿಸುವಂತೆ ಅವರು ಸೂಚಿಸಿದರು.
ಈ ಸಂಕೀರ್ಣ ಅವಧಿಯಲ್ಲಿ ಅಬಕಾರಿ, ಆದಾಯ ತೆರಿಗೆ ಮತ್ತು ವಾಣಿಜ್ಯ ತೆರಿಗೆ ಇಲಾಖಾಧಿಕಾರಿಗಳು ತಮ್ಮ ದೈನಂದಿನ ಕಾರ್ಯಕ್ರಮಗಳೊಂದಿಗೆ ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆಸಂಬಂಧಪಟ್ಟವಿಷಯಗಳಕಡೆಗೂ ಗಮನಹರಿಸಬೇಕು. ಅಗತ್ಯವಿದ್ದಲ್ಲಿ ನೆರೆಯ ಜಿಲ್ಲೆಗಳ ಅಧಿಕಾರಿ-ಸಿಬ್ಬಂಧಿಗಳ ಸೇವೆಯನ್ನು ಬಳಸಿಕೊಳ್ಳಲು ಸೂಚಿಸಿದರು.ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉಪಸ್ಥಿತರಿದ್ದರು.

## ಚಂದ್ರಪ್ಪ ಆಯ್ಕೆಗೆ ಕಾರ್ಯಕರ್ತರ ಸಂಕಲ್ಪ: ಶಾಸಕ ರಘುಮೂರ್ತಿ



» **ಚಳ್ಳಕೆರೆ**
ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಕಳೆದ ಹಲವಾರು ದಿನಗಳಿಂದ ನಿರಂತರವಾಗಿ ವ್ಯಾಪಕ ಪ್ರಚಾರ ನಡೆಸುತ್ತಿದ್ದು, ಸೋಮವಾರ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ, ಮನೆಗೂ ತೆರಳಿ ಪ್ರಚಾರ ನಡೆಸಿದರು.ನನ್ನಿವಾಳ ಗ್ರಾಮದಲ್ಲಿ ಪಕ್ಷ ಏರ್ಪಡಿಸಿದ್ದ ಸಾರ್ವಜನಿಕರ ಸಭೆಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಬಲವಾದ ಅಲೆ ಇದೆ. ಎಲ್ಲಿ ಹೋದರೂ ವಿವಿಧ ಪಕ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುವವರ ಸಂಖ್ಯೆ ಹೆಚ್ಚಾಗುತ್ತಿದೆ. ವಿಶೇಷವಾಗಿ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಒಮ್ಮೆ ಈ ಕ್ಷೇತ್ರದ ಸಂಸದರಾಗಿ ಆಯ್ಕೆಯಾಗಿ ಉತ್ತಮ ಕೆಲಸ ಮಾಡಿದ್ದಾರೆ. ಕಳೆದ ಬಾರಿ ಅನಿರೀಕ್ಷಿತವಾಗಿ ಸೋಲುಂಡಿದ್ದಾರೆ. ಈ ಬಾರಿ ಮತದಾರರ ಅನುಕಂಪದ ಜೊತೆಗೆ ಸರ್ಕಾರ ಐದು ಗ್ಯಾರಂಟಿಗಳ ಯಶಸ್ವಿ ಜಾರಿ ಹಿನ್ನೆಲೆಯಲ್ಲಿ ಅವರು ಹೆಚ್ಚು ಮತಗಳಿಂದ ಆಯ್ಕೆಯಾಗುವರು ಎಂದರು.ಹಿರಿಯ ಮುಖಂಡ ಟಿ.ಪ್ರಭುದೇವ್ ಮಾತನಾಡಿ, 10 ವರ್ಷಗಳ ಎನ್‌ಡಿಎ ಸರ್ಕಾರ ಆಡಳಿತದಲ್ಲಿ ಯಾವುದೇ ಬಡ ವರ್ಗದ ಜನರಿಗೆ ನೆರವಾಗಿಲ್ಲ. ಮಿತಿಮೀರಿದ ಬೆಲೆ ಏರಿಕೆಗೆ ಜನರು ತತ್ತರಿಸಿದ್ದಾರೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪಕ್ಷವನ್ನು ಆಯ್ಕೆ ಮಾಡುವುದು ಖಚಿತವಾಗಿದೆ ಎಂದರು.

### ಹುಣವಿನಡು ಗ್ರಾಮದಲ್ಲಿ ಕೆರೆ ಹೂಳೆತ್ತುವ ಪೂರ್ವಭಾವಿ ಸಭೆ

**ಹೊಸದುರ್ಗ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮ್ಬಿಣಾಭೀವೃದ್ಧಿ ಸಂಸ್ಥೆಯ ವತಿಯಿಂದ ಹಾಲುರಾಮೇಶ್ವರ ಯೋಜನಾ ಕಚೇರಿ ವ್ಯಾಪ್ತಿಯ ಹಾಲುರಾಮೇಶ್ವರ ವಲಯದ ತಾಲೂಕಿನ ಹುಣವಿನಡು, ಕಾರ್ಯಕ್ಷೇತ್ರದಲ್ಲಿ ಕೆರೆ ಹೂಳೆತ್ತುವ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಒಂದು ಮಹತ್ವದ ಸಭೆಯಲ್ಲಿ ಯೋಜನಾಧಿಕಾರಿಗಳು ಹಾಗೂ ಕೆರೆ ಇಂಜಿನಿಯರ್ ಮತ್ತು ಊರಿನ ಪ್ರಮುಖ ಗಣ್ಯರು ದೀಪ ಉದ್ಘಾಟನೆ ಮಾಡುವುದರ ಮೂಲಕ ಸಭೆಗೆ ಚಾಲನೆ ನೀಡಿದರು ಅಂತಿಮವಾಗಿ ಅಧ್ಯಕ್ಷರು ಯೋಜನೆಯಿಂದಾದ ಲಾಭವನ್ನು ಹೇಳಿ ಸಂತೋಷ ವ್ಯಕ್ತಪಡಿಸಿದರು ಈ ಸಂದರ್ಭದಲ್ಲಿ ಊರಿನ ಗ್ರಾಮಸ್ಥರು ಹಾಗೂ ಸಂಘದ ಸದಸ್ಯರು ಸ್ಥಳೀಯ ಸೇವಾ ಪ್ರತಿನಿಧಿ ನಗರ ವಲಯ ಮೇಲ್ವಿಚಾರಕರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಮತದಾರರನ್ನು ಮತಗಟ್ಟೆಗೆ ಕರೆತರಲು ಪ್ರೇರೇಪಿಸಿ: ಸಿಇಓ

» **ಚಿತ್ರದುರ್ಗ**
ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಮತದಾರರು ಅತಿ ಹೆಚ್ಚಿನ ಮತದಾನ ಮಾಡುವ ಮೂಲಕ ನಮ್ಮನ್ನಾಳುವ ಸಮರ್ಥ ಜನನಾಯಕನನ್ನು ಆಯ್ಕೆ ಮಾಡುವಂತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗಟ್ಟಿಗೊಳಿಸುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಹೇಳಿದರು.
ಅವರು ಇಂದು ಮತದಾರರ ಧ್ವಜದಿನಾಚರಣೆಯ ಅಂಗವಾಗಿ ಮತದಾರರಲ್ಲಿ ಜಾಗೃತಿ ಮೂಡಿಸಲು ನಮ್ಮ ನಡೆ, ಮತಗಟ್ಟೆಯ ಕಡೆ ಎಂಬ ಘೋಷವಾಕ್ಯದಡಿಯಲ್ಲಿ ನಗರದ ಸೆಂಟ್ ಥಾಮಸ್ ಶಾಲಾ ಆವರಣದಲ್ಲಿ ಧ್ವಜರೋಹಣ ನೆರವೇರಿಸಿದ ನಂತರ ಅವರು ಸಮಾರಂಭವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು. ಅತಿ ಹೆಚ್ಚಿನ ಸಂಖ್ಯೆಯ ಬುದ್ದಿಜೀವಿಗಳಿರುವ ನಗರ ಪ್ರದೇಶದಲ್ಲಿ ಪ್ರಜ್ಞಾವಂತ ಮತದಾರರೆಲ್ಲರೂ ಮತಗಟ್ಟೆಗೆ ತೆರಳಿ ಸ್ವಯಂ ಪ್ರೇರಿತರಾಗಿ, ಯಾವುದೇ ಆಸೆ-ಆಮಿಷಗಳಿಗೆ ಬಲಿಯಾಗದಂತೆ ತಮ್ಮ ಕುಟುಂಬದ ಸದಸ್ಯರೊಂದಿಗೆ ಮತ ಚಲಾಯಿಸುವಂತೆ ಅವರು ಮನವಿ ಮಾಡಿದರು.
ಈ ಚುನಾವಣೆಗಳು ದೇಶದಲ್ಲಿ ಪ್ರತಿಯೊಬ್ಬ ಪ್ರಜೆಯ ಹಕ್ಕು ಮತ್ತು ಕರ್ತವ್ಯಗಳನ್ನು ನಿರ್ವಹಿಸಲು ಅವಕಾಶ ಮಾಡಿಕೊಡಲಿವೆ. ಅಂತೆಯೇ ಜಾಗತಿಕ ವೇದಿಕೆಯಲ್ಲಿ ಭಾರತೀಯ ಪ್ರಜಾಪ್ರಭುತ್ವದ ಸರ್ವೋಚ್ಚ ಸ್ಥಾನವನ್ನು ಪ್ರದರ್ಶಿಸಲಿದೆ. ಜಿಲ್ಲಾ ಸ್ವೀಪ್ ಸಮಿತಿಯು ಆಯೋಜಿಸಿರುವ ಈ ರೀತಿಯ ಕಾರ್ಯಕ್ರಮಗಳಿಂದಾಗಿ ಹಲವು ಮತದಾರರನ್ನು ಓಲೈಸಲು ಸಾಧ್ಯವಾಗಲಿದೆ. ಈ ಎಲ್ಲಾ ಕಾರ್ಯಕ್ರಮಗಳ ಫಲಶೃತಿಯಿಂದಾಗಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೆಚ್ಚಿನ ಮತದಾನ ನಡೆಯುವ ಆಶಯ ಹೊಂದಲಾಗಿದೆ ಎಂದರು.
ಈಸಂದರ್ಭದಲ್ಲಿಉಪಸ್ಥಿತರಿದ್ದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅವರು ಮಾತನಾಡಿ, ಈ ಚುನಾವಣೆಗೆ ಸರ್ಕಾರದ ವಿವಿಧ ಇಲಾಖೆಗಳ ಅಧಿಕಾರಿಗಳು ಸತತವಾಗಿ ಶ್ರಮಿಸಿದ್ದಾರೆ. ಈ ಎಲ್ಲದರ ಉದ್ದೇಶ ಎಂದರೆ, ಈ ಸಾಮಾಜಿಕ ವ್ಯವಸ್ಥೆಯಲ್ಲಿರುವ ಪ್ರಜೆಗಳೆಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಬೇಕೆಂದವರು ನುಡಿದರು.
ವಿಶ್ವದ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಯಶಸ್ವಿ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದು ಎಂಬ ಹೆಮ್ಮೆ ನಮಗಿದೆ. ಜಾತಿ ಮತ, ಭಾಷೆ ಬಣ್ಣಗಳ ಬೇದ-ಭಾವವಿಲ್ಲದೆ ಸಂವಿಧಾನಾತ್ಮಕವಾಗಿ ದೊರೆತಿರುವ ಹಕ್ಕುಗಳನ್ನು ಚಲಾಯಿಸಬೇಕೆಂದು ಬಯಸುತ್ತವೆ ಎಂದರು.
ಜಾಗೃತ ನಾಗರೀಕರೆಲ್ಲರೂ ಅರ್ಹ ಮತದಾರರೆಲ್ಲರನ್ನು ಮತಗಟ್ಟೆಗೆ ಕರೆತರುವಂತಾಗಬೇಕು. ಆಮಿಷಗಳಿಗೆ ಬಲಿಯಾಗದೆ ಮತ ಚಲಾಯಿಸಬೇಕೆಂದವರು ನುಡಿದರು.
ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯಿಂದ ಆರಂಭವಾದ ವಾಕಥಾನ್ ಅಂತಿಮವಾಗಿ ಸೆಂಟ್ ಥಾಮಸ್ ಶಾಲೆಯಲ್ಲಿ ಸಂಪನ್ನಗೊಂಡಿತು. ಈ ಕಾರ್ಯಕ್ರಮದಲ್ಲಿ ಮಹಾನಗರಪಾಲಿಕೆ ಆಯುಕ್ತ ಶ್ರೀಮತಿ ರೇಣುಕಾ, ಪಿ.ತಿಮ್ಮಪ್ಪ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಜಗದೀಶ್, ಪರಿಶಿಷ್ಟ ಜಾತಿ ವರ್ಗಗಳ ಇಲಾಖೆಯ ಮುಖ್ಯಸ್ಥ ಪರಮೇಶ್ವರಪ್ಪ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ರೇಣುಪ್ರಸಾದ್, ಜಿ.ಪಂ.ಮುಖ್ಯ ಲೆಕ್ಕಾಧಿಕಾರಿ ಸಿ.ಮಧು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಭಾರತಿ ಬಣಕಾರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.



### ಸೆಂಟ್ ಥಾಮಸ್ ಶಾಲಾ ಸಂಕೀರ್ಣದಲ್ಲಿ ಸಖಿ ಮತಗಟ್ಟೆ

**ಚಿತ್ರದುರ್ಗ :** ಚಿತ್ರದುರ್ಗ ನಗರದ ಎಸ್.ಪಿ.ಆಫೀಸ್ ರಸ್ತೆಯಲ್ಲಿರುವ ಸೆಂಟ್ ಥಾಮಸ್ ಶಾಲಾ ಆವರಣದಲ್ಲಿ ಸ್ಥಾಪಿಸಲಾಗಿರುವ ವಾರ್ಡ್ ಸಂಖ್ಯೆ 30ಕ್ಕೆ ಒಳಪಡುವ ಮತಗಟ್ಟೆ ಸಂಖ್ಯೆ 220ರಲ್ಲಿ ಅತಿ ಹೆಚ್ಚಿನ ಸಂಖ್ಯೆಯ ಮಹಿಳಾ ಮತದಾರರಿದ್ದು, ಅವರನ್ನು ಮತಗಟ್ಟೆ ಆಕರ್ಷಿಸಲು ಸಖಿ ಮತಗಟ್ಟೆಯನ್ನು ಸ್ಥಾಪಿಸಲಾಗಿದೆ. ತಿಳಿಗುಲಾಬಿ ಬಣ್ಣದಿಂದ ಈ ಮತಗಟ್ಟೆಯನ್ನು ಅಲಂಕರಿಸಲಾಗಿದೆ. ಅಲ್ಲದೇ ಏಪ್ರಿಲ್ 26ರ ಮತದಾನ ದಿನದಂದು ಈ ಸಖಿ ಮತಗಟ್ಟೆಯಲ್ಲಿ ಸಮವಸ್ತ್ರಧಾರಿ ಮಹಿಳಾ ಸಿಬ್ಬಂಧಿಗಳೇ ಕಾರ್ಯನಿರ್ವಹಿಸುತ್ತಿರುವುದು ವಿಶೇಷ.

## ಫಾಸ್ಟ್ ನ್ಯೂಸ್

### ಬಿಜೆಪಿಯ ಸುಳ್ಳುಗಳಿಗೆ ಬಲಿಯಾಗದೇ ಬಡವರ ಪರವಾಗಿ ಕೆಲಸ ಮಾಡುವ ಕಾಂಗ್ರೆಸ್‌ಗೆ ಮತ ಹಾಕಿ



» **ಹೊಸದುರ್ಗ**

ಬಿಜೆಪಿಯ ಸುಳ್ಳುಗಳಿಗೆ ಬಲಿಯಾಗದೇ ಬಡವರ ಪರವಾಗಿ ಕೆಲಸ ಮಾಡುವ ಹಾಗೂ ಜನಸಾಮಾನ್ಯರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿ ಹಾಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರನ್ನೂ ಗೆಲ್ಲಿಸಿ ಎಂದು ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ, ಶಾಸಕ ಬಿ.ಜಿ.ಗೋವಿಂದಪ್ಪ ಮತದಾರರಲ್ಲಿ ಮನವಿ ಮಾಡಿದರು.ತಾಲೂಕಿನ ಹೊಸಹಟ್ಟಿ, ಕಲ್ಕೆರೆ, ಉಳ್ಳಾಗೊಂದಿ, ಬಲ್ಲಾಳ ಸಮುದ್ರ ಆಲಘಟ್ಟ ಹಾಗೂ ಮುಂತಾದ ಕಡೆ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರವಾಗಿ ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ಬಡವರ ಪರ ಕಾಳಜಿ ಹೊಂದಿರುವ ಪಕ್ಷ ಎಂದು ಸಾಭೀತು ಮಾಡಿದೆ. ಬಿಜೆಪಿ ಶ್ರೀಮಂತರ ಪಕ್ಷ. ಶ್ರೀಮಂತ ಉದ್ಯಮಿಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡಿದ್ದಾರೆ. ರೈತರ ಸಾಲಮನ್ನಾ ಮಾಡಲು ಮೀನ ಮೇಷ ಎಣಿಸುವ ಬಿಜೆಪಿ ಉದ್ಯಮಿಗಳ ಸಾಲಮನ್ನಾ ಮನ್ನಾ ಮಾಡಿದೆ. ಬಡವರ ಪರವಾಗಿ ಯೋಜನೆಗಳನ್ನು ಜಾರಿಗೆ ತರುವ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿ ಬೆಂಬಲಿಸಬೇಕು ಎಂದು ಮನವಿ ಮಾಡಿದರು.ಯಾವ ಪಕ್ಷಕ್ಕೆ ಮತದಾನ ಮಾಡಬೇಕು ಎಂಬುದನ್ನು ಜನರು ನಿರ್ಧಾರ ಮಾಡಬೇಕು. ಯಾವ ಪಕ್ಷ ಬಡವರ ಪರವಾಗಿ ಕೆಲಸ ಮಾಡಿದೆ. ಅಭಿವೃದ್ಧಿ ಕೆಲಸ ಮಾಡಿದೆ ಎಂಬುದನ್ನು ಜನರು ತೀರ್ಮಾನ ಮಾಡಬೇಕು ಎಂದರು ಈ ಸಂಧರ್ಬದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಜರಿದ್ದರು.

### ಕಂಠಾಪುರದಲ್ಲಿ ಕಲುಷಿತ ನೀರು ಕುಡಿದು ಸುಮಾರು 100 ಕ್ಕೂ ಹೆಚ್ಚು ಜನಕ್ಕೆ ಜ್ವರ, ತಲೆನೋವು



» **ಹೊಸದುರ್ಗ**

ತಾಲ್ಲೂಕಿನ ಜಾನಕಲ್ ಪಂಚಾಯತಿ ಕಂಠಾಪುರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಸುಮಾರು 100 ಕ್ಕೂ ಹೆಚ್ಚು ಜನ ಜ್ವರ ತಲೆನೋವು ಗಂಟಲು ನೋವುನಿಂದ ತುಂಬಾ ಆರೋಗದಲ್ಲಿ ಏರುಪೇರು ಆಗಿರು ಘಟನೆ ಸೋಮವಾರ ಬೆಳಕಿಗೆ ಬಂದಿದೆ. ಕುಡಿಯವ ನೀರಿನ ಪೈಪ್‌ಲೈನ್ ಹೊಡೆದಿರುವುದರಿಂದ ಸುಮಾರು 3 ತಿಂಗಳಿಂದ ಊರಿನ ಜನ ಪ್ಯಾಚ ಹಾಕುವುದಕ್ಕೆ ನೀರುಗಂಟಿಗೆ ಹೇಳಿದರೂ ಸಹಾ ಹಾಕಿರುವುದಿಲ್ಲ ಆದ್ದರಿಂದ ಈ ರೀತಿ ಆಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಎಪ್ರಿಲ್ 22 ರಂದು ಸೋಮವಾರ ಬೆಳ್ಳಿಗೆ 8 ಗಂಟೆಗೆ ಕಂಠಪುರ ಗ್ರಾಮಸ್ಥರು ಗ್ರಾಮದಲ್ಲಿ ಕಲುಷಿತ ನೀರಿನಿಂದ ಸುಮಾರು 100ಕ್ಕೂ ಹೆಚ್ಚು ಜನಕ್ಕೆ ಜ್ವರ. ತಲೆನೋವು. ಗಂಟಲು ನೋವು, ನೆಗಡಿ, ಬಂದಿದ್ದುತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿಗೆ ಮಾಹಿತಿಯನ್ನು ನೀಡಿದ ಹಿನ್ನೆಲೆಯಲ್ಲಿ ತಕ್ಷಣ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿಯ ಆರ್.ಆರ್.ಟಿ. ತಂಡ ಮತ್ತು ಜಿಲ್ಲಾ ಆರ್,ಆರ್,ಟಿ. ತಂಡ ಪ್ರಾಥಮಿಕ ಆರೋಗ್ಯ ಕೇಂದ್ರ ಜಾನಕಲ್‌ನ ಎಲ್ಲಾ ಆಧಿಕಾರಿ ಮತ್ತು ಸಿಬ್ಬಂದಿಗಳು ಗ್ರಾಮಕ್ಕೆ ಭೇಟಿ ನೀಡಿ ಚಿಕಿತ್ಸೆ ನೀಡುವ ಮೂಲಕ ಮುಂಜಾಗ್ರತಾ ಕ್ರಮಗಳನ್ನ ಕೈಗೊಂಡು ಗ್ರಾಮದಲ್ಲಿ ಎರಡು ತಂಡಗಳನ್ನು ಮಾಡಿಕೊಂಡು ಗ್ರಾಮದ ಎಲ್ಲಾ ಮನೆಗಳಲ್ಲಿ ಜ್ವರ ಸಮೀಕ್ಷೆ ನಡೆಸುತಿದ್ದು ತಾಲ್ಲೂಕಿನ ಸಂಚಾರಿ ಆರೋಗ್ಯ ಘಟಕ ಹಾಗೂ ಆರ್.ಬಿ.ಎಸ್.ಕೆ ತಂಡದಿಂದ ಗ್ರಾಮದಲ್ಲಿ ತಾತ್ಕಲಿಕ ಚಿಕಿತ್ಸಾ ಕೇಂದ್ರದ ವ್ಯವಸ್ಥೆ ಮಾಡಿ ಚಿಕಿತ್ಸೆ ನೀಡುತ್ತಿದ್ದಾರೆ.

### 23 ರಂದು ವೀರಭದ್ರ ದೇವರ ಗುಗ್ಗುಳ

» **ಚಿತ್ರದುರ್ಗ**

ನಗರದ ನೀಲಕಂಠೇಶ್ವರ ದೇವಾಲಯದ ಆವರಣದಲ್ಲಿನ ವೀರಶೈವ ಸಮಾಜದವತಿಯಿಂದ ಏ. 23 ರ ಮಂಗಳವಾರ ಹರಪನಹಳ್ಳಿ ವತಿಯಿಂದ ಪಟ್ಟಣದ ಮೇಗಳಪೇಟೆ ಗುಗ್ಗಳ ವೀರಭದ್ರೇಶ್ವರ ದೇವಸ್ಥಾನ ಸಮಿತಿ ಇವರಿಂದ ಜನಪದ ಕಲಾ ತಂಡದೊಂದಿಗೆ ಶ್ರೀ ವೀರಭದ್ರ ದೇವರ ಗುಗ್ಗುಳ ಮತ್ತು ಅಗ್ನಿಕುಂಡ ಕಾರ್ಯಕ್ರಮ ನಡೆಯಲಿದೆ ಎಂದು ಸಮಾಜದ ಪ್ರಕಟಣೆ ತಿಳಿಸಿದೆ.

# ಪ್ರಿಯಾಂಕಾ ಕಾರ್ಯಕ್ರಮಕ್ಕೆ ಭರದ ಸಿದ್ಧತೆ

## ಒಂದು ಲಕ್ಷಕ್ಕೂ ಹೆಚ್ಚು ಜನ ಆಗಮನ, ಮಹಿಳೆಯರೇ ಹೆಚ್ಚು –ಮಾಜಿ ಸಚಿವ ಎಚ್.ಆಂಜನೇಯ ಹೇಳಿಕೆ

» **ಚಿತ್ರದುರ್ಗ**

ಪ್ರಥಮ ಬಾರಿಗೆ ಇಂದಿರಾಗಾಂಧಿ ಮೊಮ್ಮಗಳು, ಭಾರತದ ಭವಿಷ್ಯದ ನಾಯಕಿ ಪ್ರಿಯಾಂಕಾ ಗಾಂಧಿ ಚಿತ್ರದುರ್ಗ ಜಿಲ್ಲಾ ಕೇಂದ್ರಕ್ಕೆ ಏ.23ರಂದು ಆಗಮಿಸುತ್ತಿದ್ದು, ಅವರನ್ನು ನೋಡಲು, ಅವರ ಭಾಷಣ ಕೇಳುವ ಕುತೂಹಲ ಸಹಜವಾಗಿ ಜನರಲ್ಲಿ ಹೆಚ್ಚು ಇದೆ ಎಂದು ಮಾಜಿ ಸಚಿವ ಎಚ್. ಆಂಜನೇಯ ಹೇಳಿದರು.

ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿಕಾರ್ಯಕ್ರಮದಸಿದ್ಧತಾ ಸ್ಥಳಕ್ಕೆ ಭಾನುವಾರ ಭೇಟಿ ನೀಡಿ ಪರಿಶೀಲಿಸಿದ ಅವರು, ಅಂದು ಮಧ್ಯಾಹ್ನ 2.30 ಗಂಟೆಗೆ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಆಯೋಜಿಸಿರುವ ಪ್ರಚಾರ ಸಭೆಯಲ್ಲಿ ಪ್ರಿಯಾಂಕಾ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡು ಭಾಷಣ ಮಾಡಲಿದ್ದಾರೆ ಎಂದರು.

ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರೇ ಆಗಮಿಸುವ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಸುವ್ಯವಸ್ಥಿತವಾಗಿ ನಡೆಸಲು ಸಿದ್ಧತೆ ಭರದಿಂದ ಸಾಗುತ್ತಿದೆ. 25 ಸಾವಿರ ಆಸನಗಳನ್ನು ಹಾಕಿಸಲಾಗಿದೆ. ಜೊತೆಗೆ ಜಿಲ್ಲೆಯ ವಿವಿಧ ತಾಲೂಕು, ಹಳ್ಳಿಗಳಿಂದ ಜನರೇ ಸ್ವಯಂ ಪ್ರೇರಿತರಾಗಿ ಬಸ್ ಇತರ ವಾಹನಗಳನ್ನುಮಾಡಿಕೊಂಡು ಇಂದಿರಾಗಾಂಧಿ ಮೊಮ್ಮಗಳನ್ನು ಕಣ್ತುಂಬಿಕೊಳ್ಳಲು ಬರುತ್ತಿದ್ದಾರೆ. ಅದಕ್ಕೆ ಅವಕಾಶ ಮಾಡಿಕೊಡುವ ಜವಾಬ್ದಾರಿ ನಮ್ಮದು. ಆದ್ದರಿಂದ ಅಚ್ಚುಕಟ್ಟು ಕಾರ್ಯಕ್ರಮಕ್ಕೆ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ನಾಡಿನ ಜನತೆಗೆ ಇಂದಿರಾಗಾಂಧಿ ಮತ್ತು ಅವರ ಕುಟುಂದ ಜೊತೆಗೆ ಭಾವನಾತ್ಮಕ ಸಂಬಂಧ ಇದೆ. ಉಳುವವನೆ ಒಡೆಯ, ಬ್ಯಾಂ□□ಗಳ ರಾಷ್ಟ್ರೀಕರಣ, ಗರೀಭಿ ಹಠಾವ್ ಹೀಗೆ ಬಡವರ ಪರ ನೂರಾರು ಕಾರ್ಯಕ್ರಮ ಕೊಟ್ಟ ಇಂದಿರಾ ಗಾಂಧಿಯನ್ನು ನಾಡಿನ ಜನರು ತಾಯಿ ಸ್ಥಾನದಲ್ಲಿಟ್ಟಿದ್ದಾರೆ. ದೇಶಕ್ಕೆ ಕಂಪ್ಯೂಟರ್ ಪರಿಚಯಿಸಿದ ರಾಜೀವ್ ಗಾಂಧಿ ಆಧುನೀಕ ಭಾರತದ ನಿರ್ಮಾತೃ ಎಂದೇ ಪ್ರತಿ ಗಳಿಸಿದ್ದಾರೆ. ಆದ್ದರಿಂದ ಅವರ ಕುಟುಂಬದ ಕುಡಿ ಪ್ರಿಯಾಂಕಾ ಗಾಂಧಿಯ ಭಾಷಣ ಕೇಳಲು ಅಂದಾಜು ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸುವ ನಿರೀಕ್ಷೆ ಇದ್ದು, ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.



ರಾಜ್ಯದಲ್ಲಿ 22 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಖಚಿತ ಎಂಬ ಸಮೀಕ್ಷೆಗಳು ಬಿಜೆಪಿಯವರ ನಿದ್ದೆ ಕೆಡಿಸಿದೆ. ನಮ್ಮ ಗುರಿ 28 ಕ್ಷೇತ್ರದಲ್ಲೂ ಗೆಲ್ಲಬೇಕೆಂಬುದು ಆಗಿದೆ. ಈ ನಿಟ್ಟಿನಲ್ಲಿ ಈಗಾಗಲೇ ಪಕ್ಷದ ವರಿಷ್ಠರು ಎಲ್ಲ ರೀತಿಯ ಸಂಘಟನೆ ಕೈಗೊಂಡಿದ್ದಾರೆ ಎಂದರು.ರಾಜ್ಯದಲ್ಲಿ ಐದು ಗ್ಯಾರಂಟಿ ಯೋಜನೆಗಳನ್ನು ಪಕ್ಷ ಘೋಷಣೆ ಮಾಡಿದಾಗ ಸಾಧ್ಯವೇ ಇಲ್ಲ ಇದು ಸುಳ್ಳು ಎಂದು ಪ್ರಚಾರ ನಡೆಸಿದರು. ಕಾಂಗ್ರೆಸ್ ಸರ್ಕಾರ ಅಸ್ಥಿತ್ವಕ್ಕೆ ಬರುತ್ತಿದ್ದಂತೆ ಯೋಜನೆಗಳನ್ನು ಜಾರಿಗೊಳಿಸಿದ ಬಳಿಕ ರಾಜ್ಯ ದಿವಾಳಿ ಆಗಲಿದೆ ಎಂದು ಬಿಜೆಪಿಗರು ಆರೋಪಿಸಿದರು. ಆದರೆ, ಯೋಜನೆಗಳು ಸುಗಮವಾಗಿ ಅನುಷ್ಠಾನಗೊಂಡಿದ್ದು, ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಭರದಿಂದ ಸಾಗುತ್ತಿವೆ ಎಂದರು.

ಈಗ ಎಐಸಿಸಿ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿರುವ ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ಗ್ಯಾರಂಟಿ ಸಾಧ್ಯವೇ ಇಲ್ಲ ಎಂದು ಬಿಜೆಪಿಗರು ಹೇಳುತ್ತಿದ್ದಾರೆ. ರಾಜ್ಯದಲ್ಲಿ ಹೇಗೆ ಯೋಜನೆಗಳು ಜಾರಿಗೊಂಡಿವೆ, ಅದೇ ರೀತಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ಥಿತ್ವಕ್ಕೆ ಬರುತ್ತಿದ್ದಂತೆ ಘೋಷಿತ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಲಾಗುವುದು. ಈ ವಿಷಯದಲ್ಲಿ ಜನರಿಗಷ್ಟೇ ಅಲ್ಲ ಬಿಜೆಪಿಗರಲ್ಲೂ ನಂಬಿಕೆ ಇದೆ. ಆದರೆ ಅವರು ಸೋಲುವ ಭೀತಿಗೆ ಆತಂಕಗೊಂಡು ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು.

ರಾಜ್ಯದಲ್ಲಿಮುಖ್ಯಮಂತ್ರಿಸಿದ್ದರಾಮಯ್ಯ ಅವರ ಆಡಳಿತದ ಶೈಲಿಗೆ ಬಿಜೆಪಿಯವರು ಬೆಚ್ಚಿದ್ದಾರೆ. ಆರೋಪ ಮಾಡಲು ಏನೂ ಇಲ್ಲದೆ ಕಾಂಗ್ರೆಸ್ ಅಧಿಕಾರದಲ್ಲಿ ಬರಗಾಲ ಎಂಬ ಅವೈಜ್ಞಾನಿಕ, ಮೂಡನಂಬಿಕೆ ಮಾತುಗಳನ್ನು ಆಡುತ್ತಿದ್ದಾರೆ. ಅವರ ಈ ಹೇಳಿಕೆ ಮಧ್ಯೆಯೇ ರಾಜ್ಯದಲ್ಲಿ ಮಳೆ ಆಗುತ್ತಿದೆ. ವಿಜ್ಞಾನದ ತಿಳಿವಳಿಕೆ ಇಲ್ಲದವರು, ಸಾಮಾನ್ಯ ವ್ಯಕ್ತಿಗೆ ಇರುವಷ್ಟು ಜ್ಞಾನ ಇಲ್ಲದ ಬಿಜೆಪಿಯವರು ಪ್ರಕೃತಿ ಸಹಜ ಮುನಿಸನ್ನು ಕಾಂಗ್ರೆಸ್ ಮೇಲೆ ಆರೋಪಿಸುವ ಮೂಲಕ ನಗೆಪಾಟಲು ಆಗುತ್ತಿದ್ದಾರೆ ಎಂದರು. ಬಿಜೆಪಿಯವರಿಗೆ ಶಿಕ್ಷಣ, ಆರೋಗ್ಯ ಕ್ಷೇತ್ರ, ಅಭಿವೃದ್ಧಿ, ಜನರ ಬದುಕು ಬೇಕಿಲ್ಲ. ಸುಳ್ಳುಗಳ ಮೇಲೆ ಚುನಾವಣೆ ಗೆಲ್ಲಲು ಹೊರಟಿದ್ದಾರೆ. ಈಗಾಗಲೇ ವಿಧಾನಸಭೆ ಚುನಾವಣೆಯಲ್ಲಿ ಅವರ ಒಡೆದು ಆಳುವ ನೀತಿಗೆ ಜನರು ತಕ್ಕ ಪಾಠ ಕಲಿಸಿದ್ದು, ಆ ಫಲಿತಾಂಶ ಲೋಕಸಭಾ ಚುನಾವಣೆಯಲ್ಲಿ ಮರುಕಳಿಸಲಿದೆ ಎಂದು ಹೇಳಿದರು.ಯಾದವ, ನಾಯಕ, ಒಕ್ಕಲಿಗ, ವೀರಶೈವ ಲಿಂಗಾಯತ, ಕುರುಬ, ಮಾದಿಗ ಸಮುದಾಯದ ಸೇರಿ ವಿವಿಧ ಜಾತಿ ಸಂಘಟನೆಗಳ ಮುಖಂಡರು, ರಾಷ್ಟ್ರನಾಯಕಿ ಪ್ರಿಯಾಂಕಾ ಗಾಂಧಿ ಹಾಗೂ ಸಿದ್ದರಾಮಯ್ಯ ಅವರನ್ನು ವಿಶೇಷವಾಗಿ ಸ್ವಾಗತಿಸುವ ಕುರಿತು ಚರ್ಚಿಸಿದರು.ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ.ಕೆ. ತಾ□□ಪೀರ್,ಮುಖಂಡರಾದ ಪ್ರಕಾಶ ರಾಮನಾಯ್ಕ, ಎನ್.ಡಿ.ಕುಮಾರ್, ಓ.ಶಂಕರ್, ಬಿ.ಪಿ.ಪ್ರಕಾಶಮೂರ್ತಿ, ಡಿ.ಎನ್.ಮೈಲಾರಪ್ಪ ಇತರರಿದ್ದರು.

### ಹತ್ತು ವರ್ಷದ ಸಾಧನೆ ಶೂನ್ಯ

ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸಿ, ತಮ್ಮನ್ನು ತಾವೇ ವೈಭವಿಕರಿಸಿ ಅಧಿಕಾರಕ್ಕೆ ಬಂದ ಬಿಜೆಪಿ ಹತ್ತು ವರ್ಷದಲ್ಲಿ ಏನೂ ಮಾಡಿಲ್ಲ. ಅವರ ಸಾಧನೆ ಶೂನ್ಯ. ಸಿಲಿಂಡರ್‌ನ್ನು ಸಾವಿರದ ಗಡಿ ದಾಟಿಸಿದ್ದು, 70 ವರ್ಷದಲ್ಲಿ ಕಾಂಗ್ರೆಸ್ ಸ್ಥಾಪನೆ ಮಾಡಿದ್ದ ಸರ್ಕಾರಿ ಸಂಸ್ಥೆಗಳನ್ನು ಶ್ರೀಮಂತ ಸ್ನೇಹಿತರಿಗೆ ಮಾರಾಟ ಮಾಡಿದ್ದು, ನಿರುದ್ಯೋಗ ಹೆಚ್ಚಳ, ಬೆಲೆ ಏರಿಕೆ, ರೈತರು, ಕಾರ್ಮಿಕರ ಪ್ರತಿಭಟನೆಗಳನ್ನು ಹತ್ತಿಕ್ಕುವ ಕೆಲಸ, ಸಂವಿಧಾನ ಬದಲಾಯಿಸುವ ಮಾತುಗಳು, ಪ್ರಜಾಪ್ರಭುತ್ವಕ್ಕೆ ಧಕ್ಕೆ ಉಂಟು ಮಾಡುವ ನಡೆಯೇ ಅವರ ಹತ್ತು ವರ್ಷದ ಸಾಧನೆ ಆಗಿದೆ. ಆದ್ದರಿಂದ ಜನರ ಗಮನ ಬೇರೆಡೆ ಸೆಳೆಯಲು ಜಾತಿ–ಧರ್ಮ ಎಂದು ಭಾಷಣ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಟೀಕಿಸಿದರು.

# ನಗರದಲ್ಲಿ ಬಿಜೆಪಿ ಪರ ಮನೆ ಮನೆ ಪ್ರಚಾರ

» **ಚಿತ್ರದುರ್ಗ**

ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಪರವಾಗಿ ಸವಿತಾ ಸಮಾಜದ ಕಾರ್ಯಾಧ್ಯಕ್ಷ ಲಿಂಗರಾಜ್ ಹಾಗೂ ಬಿಜೆಪಿ ಪಕ್ಷದ ಪದಾಧಿಕಾರಿಗಳು ನಗರದ ದೊಡ್ಡಪೇಟೆ 5 ನೇ ವಾರ್ಡ ಸವಿತಾ ಕಾಲೋನಿಯಲ್ಲಿ ಮನೆ ಮನೆ ಸಂಪರ್ಕ ಮಾಡಿ ಕರ ಪತ್ರ ನೀಡಿ ಬಿಜೆಪಿ ಅಭ್ಯರ್ಥಿ ಪರವಾಗಿ ಮತಯಾಚನೆ ಮಾಡಿ ಪ್ರಚಾರ ಕೈಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಲಿಂಗರಾಜ್ ನರೇಂದ್ರ ಮೋದಿ ಮೂರನೇ ಬಾರಿಗೆ ದೇಶದ ಪ್ರಧಾನಿಯಾಗ ಬೇಕಾಗಿರುವುದರಿಂದ ಈ ಬಾರಿ ಚುನಾವಣೆ ಅತ್ಯಂತ ಮಹತ್ವದ್ದಾಗಿದೆ. ಕ್ಷೇತ್ರದ ಅಭ್ಯರ್ಥಿ ಗೋವಿಂದ ಕಾರಜೋಳರನ್ನು, ಬಹುಮತದಿಂದ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಮತದಾರರಲ್ಲಿ ಮನವಿ ಮಾಡಿದರುಮೋದಿಯುವರು ಅಡಳಿತ ಅವಧಿಯಲ್ಲಿ ನಮ್ಮಂತಹ ಸಣ್ಣ ಸಣ್ಣ ಸಮುಧಾಯಗಳಿಗೆ ಅನೇಕ ಜನಪರ ಯೊಜನೆಗಳಾದ ವಿಶ್ಕಕರ್ಮ ಯೋಜನೆ ಯಿಂದ ಯಾವುದೆ ಸೇಕ್ಯೂರಿಟಿ ಇಲ್ಲದೆ ಬ್ಯಾಂಕ್ ಲೋನ್ ಸಿಗುವಂತೆ ಆಗಿದೆ. ಈ ಶ್ರಮ್ ಯೋಜನೆಯಿಂದ ನಮ್ಮಂತವರಿಗೆಲ್ಲ ಕಾರ್ಮಿಕರ ಕಾರ್ಡ್ ಸಿಕ್ಕಿದೆ. ಅಯುಷ್ಮಾನ್ ಕಾರ್ಡ್ ನಮ್ಮಲ್ಲರಿಗೂ ಅನೂಕೂಲವಾಗಿದೆ ನಮ್ಮ ಸಮಾಜದ ಬಂಧುಗಳು ತಮ್ಮ ಹಿತೈಷಿಗಳಿಗೆ ಸಂಬಂದಿಕರಿಗೆ ಮನವರಿಕೆ ಮಾಡಿ. ಮೋದಿಜಿಯವರ ದೇಶಕ್ಕೆ ಕೊಟ್ಟಂತಹ ಕೊಡುಗೆಗಳನ್ನು ನಾವುಗಳು ಸ್ಮರಿಸಬೇಕಾಗಿದೆ ಪ್ರಧಾನಿ ಮೋದಿಜಿಯಿಂದ ಮಾತ್ರ ದೇಶದ ರಕ್ಷಣೆ ಸಾಧ್ಯ ಎಂಬುದನ್ನು ನೆನಪಿಸಿ ಗೋವಿಂದ ಕಾರಜೋಳ ಪರವಾಗಿ ಮತ ಚಲಾಯಿಸುವಂತೆ ಮನವಿ ಮಾಡಿದರು.



ಈ ಸಂದರ್ಭದಲ್ಲಿ ಬಿಜೆಪಿ ಮಾದ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್,ವಕ್ತಾರ ನಾಗರಾಜ್ ಬೇದ್ರೆ, ನಗರ ಸಭಾ ಸದಸ್ಯ ಹರೀಶ್ ಸಮಾಜಿಕ ಜಾಲತಾಣದ ಸಂಚಾಲಕ ಸತ್ಯನಾರಾಯಣ, ಬಿಜೆಪಿ ಹಿರಿಯ ಮುಖಂಡ ರಾಘಣ್ಣ,ಜಿ ಆರ್ ವೆಂಕಟೇಶ್ ,ಅರ್ ಕೆ ಮಂಜುನಾಥ, ಅನಿಲ್‌ನಾಗ್ ಗೋಪಿ ಶ್ರೀನಿವಾಸ,ಕುಬೇರಪ್ಪ ,ಬೀಮಪ್ಪ ನಾಯಕ ಗಿರೀಶ್ ಸೇರಿದಂತೆ ಮತಯಾಚನೆ ಸಂದರ್ಭದಲ್ಲಿ ಉಪಸ್ಥಿತರಿದ್ದರು

## ಕೊಬ್ಬರಿ ಖರೀದಿ: ನಿಯಮ ಸರಳೀಕರಿಸಿ



» **ಚಿತ್ರದುರ್ಗ**

ಕೊಬ್ಬರಿಯನ್ನು ಈಗಿರುವ ಖರೀದಿಯ ನಿಯಮವನ್ನು ಸರಳೀಕರಣಗೊಳಿಸುವಂತೆ ಒತ್ತಾಯಿಸಿ ರೈತ ಸಂಘ ನಗರದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿತು.

ರೈತರ ಕೊಬ್ಬರಿಯನ್ನು ಕೊಳ್ಳಲಾರದಂತೆ ನಿಯಮಗಳನ್ನು ಹೇರಿ ಖರೀದಿಸುವುದು ಸರಿಯಲ್ಲ, ಏಕೆಂದರೆ ಹವಾಮಾನ ಮತ್ತು ಮಳೆಯ ಏರುಪೇರಿನಿಂದಾಗಿ ನುಸಿಬಾದೆ ಮತ್ತು ಕಪ್ಪು ತಲೆಯ ಹುಳುಗಳ ಬಾದೆಯಿಂದ ರೈತರು ತತ್ತರಿಸಿದ್ದಾರೆ. ಅಂತರ್‌ಜಲ ಕುಸಿದು ಹೋಗಿ ರೈತರು ತಮ್ಮ ತೋಟಗಳನ್ನು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ ಬರಗಾಲದ ಈ ಗಂಭೀರತೆಯಲ್ಲೂ ಅತಾರ್ಕಿಕವಾದ ಮತ್ತು ಕಠಿಣವಾದ ನಿಯಮಗಳನ್ನು ಹೇರಿ ಖರೀದಿಸುವುದು ಸರಿಯಲ್ಲ. ಈ ನಿಯಮಗಳಿಂದಾಗಿ ರೈತರು ಅರ್ಧದಷ್ಟು ಕೊಬ್ಬರಿಯು ಸಹ ಮಾರಾಟವಾಗುವುದಿಲ್ಲ ಎಂದು ಸಂಕಷ್ಟ ತೋಡಿಕೊಂಡರು.

## ಪ್ರಮುಖ ಸುದ್ದಿ

# ಎಂಸಿಸಿ ಉಲ್ಲಂಘನೆಯಾದಲ್ಲಿ ತಕ್ಷಣ ಕ್ರಮ: ಲಶ್ಮಿ

» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಚುನಾವಣೆ ನಡೆಯುತ್ತಿದ್ದು ಚುನಾವಣೆಯನ್ನು ಮುಕ್ತ, ನ್ಯಾಯ ಸಮ್ಮತವಾಗಿ ನಡೆಸಲು ಹಾಗೂ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾದಲ್ಲಿ ತಕ್ಷಣ ಚುನಾವಣಾಧಿಕಾರಿಗಳು ಕ್ರಮ ಕೈಗೊಳ್ಳಲು ಸ್ವತಂತ್ರರುಎಂದುಚುನಾವಣಾಆಯೋಗದ ಸಾಮಾನ್ಯ ವೀಕ್ಷಕರಾದ ಎಂ.ಲಶ್ಮಿ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಚುನಾವಣಾಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳು, ಸ್ವೀಪ್ ಅಧ್ಯಕ್ಷರು, ನೋಡಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಆಯಾ ಕ್ಷೇತ್ರವಾರು ಚುನಾವಣಾ ಅಂಕಿ ಅಂಶ ಹಾಗೂ ಮಾದರಿ ನೀತಿ ಸಂಹಿತೆ ಅನುಷ್ಠಾನ ಕಾರ್ಯಸೂಚಿಯ ಬಗ್ಗೆ ಮಾಹಿತಿ ಪಡೆದು ಮಾತನಾಡಿದರು. ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ಮಾಹಿತಿ ಇದ್ದಲ್ಲಿ ಚುನಾವಣಾಧಿಕಾರಿಗಳ ಗಮನಕ್ಕೆ ತರಲಾಗುತ್ತದೆ. ಎಲ್ಲಾ ತಂಡದವರು ಕ್ರಿಯಾಶೀಲರಾಗಿ ಕೆಲಸ ಮಾಡುವ ಮೂಲಕ, ಮತದಾರರ ಮೇಲೆ ಯಾವುದೇ ಆಮಿಷ, ಒತ್ತಡ ಇಲ್ಲದಂತೆ ಮತದಾನದಲ್ಲಿ ಸ್ವಯಂಪ್ರೇರಿತರಾಗಿ ಭಾಗವಹಿಸುವಂತಹ ವಾತಾವರಣವನ್ನು ಕಲ್ಪಿಸುವ ಮೂಲಕ ಶಾಂತಯುತ ಹಾಗೂ ಮುಕ್ತ ಚುನಾವಣೆ ನಡೆಸಲು ಕರ್ತವ್ಯ ನಿರ್ವಹಿಸಬೇಕೆಂದರು.ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ಎಂ.ವಿ.ವೆಂಕಟೇಶ್ ಮಾತನಾಡಿ ಚುನಾವಣೆಯಲ್ಲಿ ಪಾರದರ್ಶಕತೆ, ಮುಕ್ತ, ನ್ಯಾಯಸಮ್ಮತ, ನಿಯಮಬದ್ದವಾಗಿ ಹಾಗೂ ಸಕ್ರಿಯವಾಗಿ ಚುನಾವಣಾ ಕರ್ತವ್ಯ ನಿರ್ವಹಿಸಬೇಕು. ಯಾವುದೇ ಹಂತದಲ್ಲಿಯು ಚುನಾವಣಾ ನಿಯಮಗಳನ್ನು ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು.ಯಾವುದೇ ಅಧಿಕಾರಿಗಳು ಚುನಾವಣಾ ಕರ್ತವ್ಯದಲ್ಲಿ ಉದಾಸೀನತೆ, ಎಂಸಿಸಿ ಅನುಷ್ಠಾನದಲ್ಲಿ ಲೋಪದೋಷ ಕಂಡುಬಂದಲ್ಲಿ ಚುನಾವಣಾ ವೀಕ್ಷಕರು ಆಯೋಗಕ್ಕೆ ನಿರ್ಧಾಕ್ಷೀಣ್ಯವಾಗಿ ವರದಿ ಮಾಡಲಿದ್ದು ಕಠಿಣ ಕ್ರಮ ಎದುರಿಸಬೇಕಾಗುತ್ತದೆ.



ಆದ್ದರಿಂದ ಎಲ್ಲಾ ಅಧಿಕಾರಿಗಳು ಚುನಾವಣಾ ಕೆಲಸದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಯಶಸ್ವಿ ಅನುಷ್ಠಾನಾಧಿಕಾರಿಗಳಾಗಿ ಕೆಲಸ ಮಾಡಬೇಕೆಂದರು.ವೀಕ್ಷಕರಿಗೆ ಮಾಹಿತಿ; ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಹರಪನಹಳ್ಳಿ ಸೇರಿದಂತೆ ಜಿಲ್ಲೆಯ 7 ವಿಧಾನಸಭಾಕ್ಷೇತ್ರಗಳುಸೇರಲಿದ್ದು8ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು ಕ್ಷೇತ್ರದಲ್ಲಿನ ಮತಗಟ್ಟೆಗಳು, ಇದರಲ್ಲಿ ಕ್ರಿಟಿಕಲ್, ವಲ್ನೆರೆಬಲ್, ಒಂದಕ್ಕಿಂತ ಹೆಚ್ಚು ಇರುವ ಕ್ಲಸ್ಟರ್ ಮತಗಟ್ಟೆ ಮತ್ತು 3 ಕ್ಕಿಂತ ಹೆಚ್ಚು ಒಂದೇ ಕಡೆ ಇರುವ ಮತಗಟ್ಟೆಗಳ ವಿವರ ನೀಡಿದರು. ಮತ್ತು ಎಂ.ಸಿ.ಸಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಾರ್ ರೂಂ ಮೂಲಕ ಅಕ್ರಮ ಚಟುವಟಿಕೆಗಳ ಮೇಲೆ ನಿಗಾವಹಿಸಿರುವ ಬಗ್ಗೆ ಮಾಹಿತಿ ನೀಡಿದರು.

ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ನೀತಿ ಸಂಹಿತೆ ಸಂದರ್ಭದಲ್ಲಿ ರಸ್ತೆಬದಿಯ ಇಲಾಖೆ ಜಾಗೃತಿ ಕಾರ್ಯಾಚರಣೆ ಹೆಚ್ಚಿಸಿ ವಾಹನಗಳ ತಪಾಸಣೆ ಹೆಚ್ಚಿಸಲಾಗಿದೆ. ಮತ್ತು ವಸ್ತುಗಳ ಸಂಗ್ರಹಣಾ ಗೋಡೌನ್‌ಗಳ ಶೋಧನೆ ನಡೆಸುವ ಮೂಲಕ ಉಚಿತ ಕೊಡುಗೆಗಳ ಮೇಲೆ ಸಂಪೂರ್ಣ ಕಣ್ಗಾವಲು ವಹಿಸಲಾಗಿದೆ ಎಂದರು.

ಮನೆಯಿಂದ ಮತದಾನ; 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷಚೇತನರು ಮನೆಯಿಂದಲೇ ಮತದಾನ ಮಾಡಲು ಅವಕಾಶ ಇದ್ದು 85 ವರ್ಷ ಮೇಲ್ಪಟ್ಟ 1458 ಮತದಾರರು ಮತ್ತು 804 ವಿಶೇಷಚೇತನರು ಮನೆಯಿಂದಲೇ ಮತದಾನ ಮಾಡುವರು. ಮತ್ತು ಅಗತ್ಯ ಸೇವೆಯಡಿ ಬರುವ 915 ಗೈರು ಮತದಾರರು ಸೌಲಭ್ಯ ಕೇಂದ್ರದಲ್ಲಿ ಮತದಾನ ಮಾಡುವರು ಎಂದು ನೋಡಲ್ ಅಧಿಕಾರಿ ಭಾವನ ಮಾಹಿತಿ ನೀಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ಹಾಗೂ ಸಹಾಯಕ ಚುನಾವಣಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T